ಕನ್ನಡಪ್ರಭ
ಮಂಗಳವಾರ 5.05.2026

ಹೆಚ್ಚಿನ ಸುದ್ದಿ ಪುಟ 13ರಲ್ಲಿ

ಗರಿಷ್ಠ 33°C | ಕನಿಷ್ಠ 23°C

ಸುದ್ದಿ ಸಿಂಚನ

'ಪರಿಸರ ಆರಾಧಕರಾದಾಗ ಮಾತ್ರ ಪ್ರಕೃತಿ ರಕ್ಷಣೆ'

ಬೇತಮಂಗಲ: ಮನೆಗಳಲ್ಲಿ ಸಾಕುಪ್ರಾಣಿಗಳನ್ನು ಹೇಗೆ ಪೋಷಿಸುತ್ತೇವೆಯೋ, ಅದೇ ರೀತಿ ಗಿಡಮರಗಳನ್ನು ಪೋಷಿಸಿದಾಗ ಮಾತ್ರ ಪರಿಸರ ಉಳಿಸಲು ಸಾಧ್ಯ. ಕೇವಲ ಪರಿಸರ ಪ್ರೇಮಿಗಳಾದರೆ ಸಾಲದು, ಪರಿಸರ ಆರಾಧಕರಾಗಬೇಕು ಎಂದು 3ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಶಿವಕುಮಾರ್‌ಅಭಿಪ್ರಾಯ ಪಟ್ಟರು. ಟಿ.ಗೊಲ್ಲಹಳ್ಳಿ ಹೊರವಲಯದ ಕೆರೆಯ ಅಂಗಳದಲ್ಲಿ ತಬಾರಹಳ್ಳಿ ಬೆಳಕು ಟ್ರಸ್ಟ್, ಟಿ.ಗೊಲ್ಲಹಳ್ಳಿ ಗ್ರಾಪಂನಿಂದ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ಹಣ ದುಂದುವೆಚ್ಚ ಮಾಡುವ ಬದಲು, ನೆನಪಿನ ಸಂಕೇತವಾಗಿ ಗಿಡಗಳನ್ನು ವಿತರಿಸುವ ಮೂಲಕ ಪರಿಸರ ಸಂರಕ್ಷಣೆಗೆ ಒತ್ತು ನೀಡಬೇಕು ಎಂದರು. ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರಾದ ಜಯಲಕ್ಷ್ಮೀ ತಮ್ಮ ಪುತ್ರನ ಹುಟ್ಟುಹಬ್ಬದ ಅಂಗವಾಗಿ ಕೆರೆ ಅಂಗಳದಲ್ಲಿ ಸಸಿ ನಾಟಿ ಮಾಡುವ ಮೂಲಕ ಸಮಾಜಕ್ಕೆ ಮಾದರಿಯಾದರು. ಪ್ರತಿಯೊಬ್ಬರೂ ತಮ್ಮ ಮನೆಯ ಶುಭ ಸಮಾರಂಭಗಳಲ್ಲಿ ಗಿಡ ನೆಡುವ ಮೂಲಕ ಪರಿಸರಕ್ಕೆ ಕೊಡುಗೆ ನೀಡಬೇಕು ಎಂದು ಹೇಳಿದರು. ಅಪರ ಹಿರಿಯ ಸಿವಿಲ್ ನ್ಯಾಯಾಧೀಶರಾದ ಮುಜಾಫರ್‌ಮಂಜೂರಿ, ನ್ಯಾಯಾಧೀಶರಾದ ಶೆಮಿದ, ವಕೀಲರ ಸಂಘದ ಅಧ್ಯಕ್ಷ ರಾಜಗೋಪಾಲ್ ಗೌಡ, ಬೇತಮಂಗಲ ವೃತ್ತ ನಿರೀಕ್ಷಕ ರಂಗಶಾಮಯ್ಯ, ಕಸಾಪ ನಿಕಟ ಪೂರ್ವ ಅಧ್ಯಕ್ಷ ನಾಗರಾಜ್, ಗ್ರಾಪಂ ಪಿಡಿಒ ಶ್ರೀನಿವಾಸ್ ಮೂರ್ತಿ, ಬೆಳಕು ಟ್ರಸ್ಟ್ ಅಧ್ಯಕ್ಷೆ ರಾಧಾಮಣಿ, ಸ್ಕೌಟ್ಸ್-ಗೈಡ್ಸ್ ಬಾಬು, ಪಾರ್ಥ, ಲೋಕೇಶ್ ಆನಂದ್ ಇದ್ದರು.

ಲಯನ್ಸ್ ಕ್ಲಬ್‌ನಿಂದ ಉಚಿತ ಮಜ್ಜಿಗೆ, ಪಾನಕ ವಿತರಣೆ

ಕೋಲಾರ: ಲಯನ್ಸ್ ಕ್ಲಬ್, ಶ್ರೀಸಾಯಿ ಸೌಹಾರ್ದ ಕ್ರೆಡಿಟ್ ಕೋ-ಆಪರೇಟೀವ್ ಸೊಸೈಟಿಯಿಂದ ಬೇಸಿಗೆಯ ತಾಪಮಾನದಿಂದ ಕಂಗೆಟ್ಟ ಜನತೆಗೆ ಉಚಿತ ಮಜ್ಜಿಗೆ, ಪಾನಕ ವಿತರಣೆ ಕಾರ್ಯಕ್ರಮಕ್ಕೆ ನಗರದ ಅಂತರಗಂಗೆ ರಸ್ತೆಯ ಲಯನ್ಸ್ ಕ್ಲಬ್ ಮುಂಭಾಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಹಕಾರ ಸಂಘದ ಅಧ್ಯಕ್ಷ ಕೆ.ಎಸ್.ಗಣೇಶ್ ಚಾಲನೆ ನೀಡಿದರು. ಲಯನ್ಸ್ ಕ್ಲಬ್ ಹಾಗೂ ಅದರ ಸದಸ್ಯರು, ಪದಾಧಿಕಾರಿಗಳ ಸಾಮಾಜಿಕ ಕಾಳಜಿ ಮೆಚ್ಚುವಂತದ್ದು, ಬಿಸಿಲಿನ ಬೇಗೆಯಿಂದ ನೊಂದ ಪಾದಾಚಾರಿಗಳ ದಾಹ ತೀರಿಸುವ ಮಹತ್ಕಾರ್ಯಕ್ಕೆ ಧನ್ಯವಾದ. ಮಳೆ ಬಾರದ ಹಿನ್ನಲೆಯಲ್ಲಿ ತಾಪಮಾನ ಹೆಚ್ಚುತ್ತಿದೆ, ಜನತೆ ಬೀದಿಗೆ ಬರಲು ಹೆದರುವಂತಾಗಿದೆ, ಇಂತಹ ಸಂದರ್ಭದಲ್ಲಿ ದಾಹ ತಣಿಸುವ ಸಾಮಾಜಿಕ ಕಾಳಜಿ ಮೆಚ್ಚುವಂತದ್ದು, ಇಂತಹ ಕಾರ್ಯಗಳಿಗೆ ಜನರ ಸಹಕಾರವೂ ಅಗತ್ಯ ಎಂದರು. ಕಾರ್ಯಕ್ರಮದಲ್ಲಿ ನಗರಸಭೆ ಮಾಜಿ ಸದಸ್ಯ ಸಲಾಲುದ್ದೀನ್ ಬಾಬು, ಲಯನ್ಸ್ ಕ್ಲಬ್ ಅಧ್ಯಕ್ಷೆ ಪ್ರಭಾ ಆನೂರ್, ಲಯನ್ಸ್ ಕ್ಲಬ್‌ನ ಕಾರ್ಯದರ್ಶಿ ಸುನಿತಾ, ಖಜಾಂಚಿ ಮಂಜುಳಾ ಅನಂತಪ್ಪ, ಲಯನ್ಸ್ ಕ್ಲಬ್ ಸದಸ್ಯರಾದ ಲಕ್ಷ್ಮೀನಾರಾಯಣ, ಬಿಂದು ವೆಂಕಟೇಶ್, ಅನಂತಪ್ಪ, ರವೀಂದ್ರ, ಪಾರ್ಥಸಾರಥಿ, ಬಿ.ಎಲ್. ವೆಂಕಟೇಟ್, ಮಂಜುನಾಥ್, ಸಿ.ವಿ.ವಿಷ್ಣು ಇದ್ದರು.

ಇಂದು ಡಿಸಿ ಕಚೇರಿಗೆ ಕಾಲ್ನಡಿಗೆ ಜಾಥಾ

ಕೋಲಾರ: ಸಮಾನ ಕೆಲಸಕ್ಕೆ ಸಮಾನ ವೇತನ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಜಿಲ್ಲಾ ಪರವಾನಗಿ ಭೂ ಮಾಪಕರ ಸಂಘದಿಂದ ಪ್ರತಿಭಟನಾ ರ‍್ಯಾಲಿ ಹಮ್ಮಿಕೊಂಡಿದೆ. ಮಂಗಳವಾರ ಬೆಳಗ್ಗೆ 10 ಗಂಟೆಗೆ ನಗರದ ಎಂ.ಜಿ.ರಸ್ತೆಯ ಗಾಂಧಿವೃತ್ತದ ಗಾಂಧಿ ಪ್ರತಿಮೆ-ಅಂಬೇಡ್ಕರ್‌ಪ್ರತಿಮೆಗೆ ಮಾಲಾರ್ಪಣೆ ಮಾಡಿದ ನಂತರ ಕಾಲ್ನಡಿ ಜಾಥಾ ಬಂಗಾರಪೇಟೆ ರಸ್ತೆಯಿಂದ ಮೆಕ್ಕೆ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ, ಕಾಲ್ನಡಿಗೆಯಲ್ಲಿ ಡಿಸಿ ಕಚೇರಿಗೆ ತೆರಳಿ ಡಿಸಿಗೆ ಹಾಗೂ ಭೂ ದಾಖಲೆಗಳ ಉಪ ನಿರ್ದೇಶಕರಿಗೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಮನವಿ ಪತ್ರ ಸಲ್ಲಿಸಲಾಗುವುದು ಎಂದು ಜಿಲ್ಲಾ ಪರವಾನಗಿ ಭೂ ಮಾಪಕರ ಸಂಘದ ಅಧ್ಯಕ್ಷ ಕೆ.ಶಿವಾನಂದ ತಿಳಿಸಿದ್ದಾರೆ.



ಬೇತಮಂಗಲ ಸಮೀಪದ ಟಿ.ಗೊಲ್ಲಹಳ್ಳಿ ಕೆರೆಯ ಅಂಗಳದಲ್ಲಿ ಬೆಳಕು ಟ್ರಸ್ಟ್‌ನಿಂದ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. 3ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಶಿವಕುಮಾರ್, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರಾದ ಜಯಲಕ್ಷ್ಮೀ ಇತರರಿದ್ದರು.



ಲಯನ್ಸ್ ಕ್ಲಬ್ ಕೋಲಾರ, ಶ್ರೀಸಾಯಿ ಸೌಹಾರ್ದ ಕ್ರೆಡಿಟ್ ಕೋ-ಆಪರೇಟೀವ್ ಸೊಸೈಟಿ ಆಶ್ರಯದಲ್ಲಿ ಬೇಸಿಗೆಯ ಹಿನ್ನೆಲೆಯಲ್ಲಿ ಜನತೆಗೆ ಉಚಿತ ಮಜ್ಜಿಗೆ, ಪಾನಕ ವಿತರಣೆ ಕಾರ್ಯಕ್ರಮಕ್ಕೆ ಕೋಲಾರದ ಅಂತರಗಂಗೆ ರಸ್ತೆಯಲ್ಲಿ ಚಾಲನೆ ನೀಡಲಾಯಿತು.



ಬಿಎಸ್‌ವೈ ಅಭಿಮಾನೋತ್ಸವಕ್ಕೆ ನಾಗಲಾಪುರ ಶ್ರೀಗೆ ಆಹ್ವಾನ

ಕೋಲಾರ: ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ರಾಜಕೀಯ ಕ್ಷೇತ್ರದಲ್ಲಿ 50 ವರ್ಷದ ಸೇವೆಯ ಗೌರವಾರ್ಥವಾಗಿ ಆಯೋಜಿಸಿರುವ ಅಭಿಮಾನೋತ್ಸವ ಕಾರ್ಯಕ್ರಮದಲ್ಲಿ 50 ಮಠಗಳ ಶ್ರೀಗಳು ನೀಡುವ ಆಶೀರ್ವಾದ ಕಾರ್ಯಕ್ರಮಕ್ಕೆ ತಾಲೂಕಿನ ಶ್ರೀ ನಾಗಲಾಪುರ ಸಂಸ್ಥಾನ ಮಠದ ಶ್ರೀ ತೇಜೇಶ ಲಿಂಗ ಶಿವಚಾರ್ಯರನ್ನು ಆಹ್ವಾನಿಸಲು ಮಾಲೂರಿನ ಮಾಜಿ ಶಾಸಕ ಮಂಜುನಾಥ್ ಗೌಡ ಇತ್ತೀಚೆಗೆ ಮಠಕ್ಕೆ ಭೇಟಿ ನೀಡಿ ಮೇ 9ರಂದು ಚಿತ್ರದುರ್ಗದಲ್ಲಿ ಅಭಿಮಾನೋತ್ಸವ ಸಮಾರಂಭಕ್ಕೆ ಆಹ್ವಾನ ನೀಡಿ ಶ್ರೀಗಳಿಂದ ಆಶೀರ್ವಾದ ಪಡೆದರು.

ಡಿಸಿ ನಗರ ಸಂಚಾರ: ಅವ್ಯವಸ್ಥೆಗಳ ವಿರುದ್ಧ ಕಿಡಿ

ಕೋಲಾರದಲ್ಲಿ ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಸೈಕಲ್ ಸವಾರಿ | ಸಮಸ್ಯೆಗಳನ್ನು ಪರಿಹರಿಸಲು ಅಧಿಕಾರಿಗಳಿಗೆ ಗಡುವು

• **ಕನ್ನಡಪ್ರಭ ವಾರ್ತೆ** ಕೋಲಾರ

ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ನಗರದಲ್ಲಿ ಸೈಕಲ್ ಸಂಚಾರ ಮೂಲಕ ವಿವಿಧ ವಾರ್ಡ್‌ಗಳಿಗೆ ಭೇಟಿ ನೀಡಿ ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಿದರು. ಕೆಲವೆಡೆ ಸಾರ್ವಜನಿಕರ ಸಮಸ್ಯೆಗಳನ್ನು ಖುದ್ದಾಗಿ ವೀಕ್ಷಿಸಿ ಸಂಬಂಧಪಟ್ಟ ಅಧಿಕಾರಿಗಳಿಗೆ ಸಮಸ್ಯೆಗಳನ್ನು ಪರಿಹರಿಸಲು ಕ್ರಮಕೈಗೊಳ್ಳಲು ಗಡುವು ನೀಡಿದರು.

ನಗರದ ವಿವಿಧಡೆ ರಸ್ತೆ ಬದಿಯಲ್ಲಿ ತ್ಯಾಜ್ಯದ ರಾಶಿಗಳು ಕಂಡ ಜಿಲ್ಲಾಧಿಕಾರಿ ಆರೋಗ್ಯ ನಿರೀಕ್ಷಕ ನವಾಜ್, ಮಂಜುನಾಥ್‌ರನ್ನು ಹಿಗ್ಗಮುಗ್ಗ ತರಾಟೆಗೆ ತೆಗೆದುಕೊಂಡು ರಸ್ತೆ ಬದಿ ಗುಡ್ಡದಂತಿರುವ ಕಸ ಕೂಡಲೇ ತೆರವು ಮಾಡಿಸಬೇಕೆಂದು ತಾಕೀತು ಮಾಡಿದರು. ಸಾರ್ವಜಿನಿಕರಿಗೆ ಬ್ಲಾಕ್ ಪಾಯಿಂಟ್ ಗಳಲ್ಲಿ ಕಸವನ್ನು ಸುರಿಯುವಂತ ಅರಿವು ಮೂಡಿಸಲಿಲ್ಲ ಏಕೆಂದು ಪ್ರಶ್ನಿಸಿ ಸಾರ್ವಜನಿಕರಿಗೆ ಅರಿವು ಮೂಡಿಸಲು ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದರು.

ನಗರದ ಕಾರಂಜಿ ಕಟ್ಟೆಯ ರಸ್ತೆಯ ಅಗಲೀಕರಣ ಕುರಿತು ಜಿಲ್ಲಾ ನಗರಾಭಿವೃದ್ಧಿ ಯೋಜನಾ ನಿರ್ದೇಶಕ ಅಂಬಿಕಾರಿಗೆ ಪ್ರಸ್ತಾವನೆ ಸಿದ್ಧಪಡಿಸಲು ಸೂಚಿಸಿದರು. ಬಸ್ ನಿಲ್ದಾಣದಿಂದ ವಾಹನಗಳು ನಿರ್ಗಮಿಸುವ ಸಂದರ್ಭದಲ್ಲಿ ವಾಹನಗಳ ದಟ್ಟಣೆಯಿಂದ ಜಾಮ್ ಆಗುತ್ತಿರುವುದನ್ನು ಗಮನಿಸಿದ ಜಿಲ್ಲಾಧಿಕಾರಿ ರಸ್ತೆ ಒಂದು ಬದಿಯಲ್ಲಿ ಆಟೋಗಳ ನಿಲ್ದಾಣ ಇದೆ, ಬೀದಿ ಬದಿ ವ್ಯಾಪಾರಿಗಳು, ತಳ್ಳುವ ಗಾಡಿಗಳ ನಿಲುಗಡೆಯಿಂದ ಸುಗಮವಾದ ಸಂಚಾರಕ್ಕೆ ಅಡಚಣೆಯಾಗುತ್ತಿರುವುದು ಹಾಗಾಗಿ ರಸ್ತೆ ಅಗಲೀಕರಣ ಅತ್ಯವಶ್ಯಕವೆಂದು ಅಭಿಪ್ರಾಯಪಟ್ಟರು.



ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಕೋಲಾರದಲ್ಲಿ ಸೈಕಲ್ ಸಂಚಾರ ಮೂಲಕ ವಿವಿಧ ವಾರ್ಡ್‌ಗಳಿಗೆ ಭೇಟಿ ನೀಡಿ ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಿದರು.

ಬಸ್ ನಿಲ್ದಾಣದಿಂದ ಕಾರಂಜಿಕಟ್ಟೆ ರಸ್ತೆ ಮೂಲಕ ಖಾದ್ರಿಪುರದವರೆಗೆ ಜೋಡಿ ರಸ್ತೆಯಾಗಿ ಕಾಮಗಾರಿ ಕೈಗೆತ್ತಿಕೊಳ್ಳಲು ಲೋಕೋಪಯೋಗಿ ಇಲಾಖೆ ಅಧಿಕಾರಿಗಳ ಚರ್ಚೆ ನಡೆಸಿ ಕ್ರಮಕೈಗೊಳ್ಳಲು ಅಂಬಿಕಾರಿಗೆ ಸೂಚಿಸಿದರು.

ಕೀಲುಕೋಟೆ ಆಂಜನೆಯಸ್ವಾಮಿ ದೇವಾಲಯದ ಕಾಂಪೌಂಡ್ ಗೋಡೆ ಸ್ವಲ್ಪ ಒಳಗೆ ನಿರ್ಮಿಸಿಕೊಂಡು ರಸ್ತೆಯ ಅಗಲೀಕರಣಕ್ಕೆ ಬಳಸಿಕೊಳ್ಳುವುದು ಅನಿವಾರ್ಯವಾಗಿದೆ. ಇದಕ್ಕೆ ಸಾರ್ವಜನಿಕರ ಹಾಗೂ ದೇವಾಲಯ ಸಮಿತಿ ವಿಶ್ವಾಸಕ್ಕೆ ಪಡೆದುಕೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸಲಹೆ ನೀಡಿದರು.

ಕ್ಲಾಕ್ ಟವರ್‌ಬಳಿ ತೆರೆದ ರಸ್ತೆಯೇ ಮಾಂಸದ ಅಂಗಡಿಗಳು ಇದ್ದು ಮಾಂಸದ ಗುಡ್ಡೆಗಳು ಇರುವುದು ಮಾಂಸ ನೇತು ಹಾಕಿರುವುದು ಕಂಡು ಜಿಲ್ಲಾಧಿಕಾರಿ ನಗರಸಭೆಯ ಆರೋಗ್ಯಾಧಿಕಾರಿಗಳ ವಿರುದ್ಧ ಕಿಡಿ ಕಾರಿದರು. ರಸ್ತೆಯಲ್ಲಿ ಧೂಳು, ಕಸವು ಮಾಂಸದ ಮೇಲೆ ಬಿದ್ದು ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವುದೆಂಬ ಕನಿಷ್ಠ ಪ್ರಜ್ಞೆಯು ಇಲ್ಲವೇನ್ರಿ ಇನ್ನೇನು ತಾನೇ ನೀವು ಕೆಲಸ ಮಾಡುತ್ತಿದ್ದೀರಿ ಎಂಬುವುದಕ್ಕೆ ಇವೆಲ್ಲಾ ನಿದರ್ಶವಾಗಿದೆ ಎಂದು ಆರೋಗ್ಯಾಧಿಕಾರಿಗೆ ಛೀಮಾರಿ ಹಾಕಿದರು.

ಸ್ವಚ್ಚತೆ ಕಾಪಾಡುವ ದಿಸೆಯಲ್ಲಿ ಮಾಂಸಗಳನ್ನು ಗಾಜಿನ ಬಾಕ್ಸ್ ಒಳಗಿಟ್ಟು ವ್ಯಾಪಾರ ವಹಿವಾಟು ನಡೆಸಲು ಸಂಬಂಧಪಟ್ಟ ಅಂಗಡಿಗಳ ಮಾಲೀಕರಿಗೆ ನೋಟಿಸ್ ಜಾರಿ ಮಾಡಿ, ಇವರೆಲ್ಲಾ ಪರವಾನಗಿ ಪಡೆದಿದ್ದಾರೆಯೇ ನಗರದಲ್ಲಿ ನಿಗದಿತ ಕಸಾಯಿಖಾನೆ ಇರುವ ಕಡೆ ಮಾರಾಟ ಮಾಡಲು ಹಾಗೂ ತ್ಯಾಜ್ಯಗಳಿಂದ ವಾಯು ಮಾಲಿನ್ಯ ಉಂಟಾಗದಂತೆ ಸಾರ್ವಜನಿಕರಿಗೆ ತೊಂದರೆಯಾಗದಂತೆ ನಗರ ಹೊರವಲಯದಲ್ಲಿ ವಿಲೇವಾರಿ ಮಾಡಲು ಕ್ರಮ ವಹಿಸಲು ಪೌರಾಯುಕ್ತರಿಗೆ ಸೂಚಿಸಿದರು.

ಕೋಲಾರಮ್ಮ ದೇವಾಲಯದ ರಸ್ತೆಯ ಎರಡು ಬದಿಗಳಲ್ಲಿ ಅಳವಡಿಸಿರುವ ಸಾಂಸ್ಕೃತಿಕ ದೀಪಗಳನ್ನು ವೀಕ್ಷಿಸಿದ ನಂತರ ಪ್ರಭಾತ್ ಚಿತ್ರಮಂದಿರ ರಸ್ತೆಯಲ್ಲಿ ಬೀದಿ ಬದಿ ವ್ಯಾಪಾರಿಗಳಿಗೆ ವ್ಯಾಪರಕ್ಕೆ ಅನುವು ಮಾಡಿ ಕೊಡಲು ಶೆಡ್‌ಗಳನ್ನು ನಿರ್ಮಿಸಲು ಸ್ಥಳ ಪರಿಶೀಲನೆ ನಡೆಸಿದರು. ಅಂತರಗಂಗೆ ರಸ್ತೆಯಲ್ಲಿ ನಗರಸಭೆಗೆ ಸೇರಿದ 24 ವಾಣಿಜ್ಯ ಮಳಿಗೆಗಳ ಸಂಕೀರ್ಣದಲ್ಲಿ ಕೇವಲ 10 ರಿಂದ 12 ಅಂಗಡಿಗಳು ಮಾತ್ರ ಬಾಡಿಗೆ ನೀಡಲಾಗಿದೆ. ಉಳಿದ ಅಂಗಡಿಗಳನ್ನು ದುರಸ್ಥಿಪಡಿಸಿ ಹರಾಜು ಹಾಕುವ ಮೂಲಕ ನಗರಸಭೆಗೆ ಆದಾಯ ಮಾಡಿಕೊಳ್ಳಬೇಕೆಂದು ಸೂಚಿಸಿದ ಜಿಲ್ಲಾಧಿಕಾರಿ ಇಷ್ಟು ವರ್ಷದಿಂದ ಬಾಡಿಕೆ ನೀಡಲು ಕ್ರಮ ಕೈಗೊಳ್ಳದೆ ಲಕ್ಷಾಂತರ ರು. ನಷ್ಟಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ ಕೆಂಡಕಾರಿದರು.

ನಗರಸಭೆ ಸೇರಿದ ಖಾಲಿ ನಿವೇಶಗಳನ್ನು ಹಾಗೂ ಇತರೆ ಆಸ್ತಿ ಉಳಿಸಬೇಕು. ಅವುಗಳನ್ನು ಗುರುತಿಸಿ ಫೆನ್ಸಿಂಗ್ ಆಳವಡಿಸಿ ನಗರಸಭೆ ಆಸ್ತಿಯೆಂದು ಫಲಕಗಳನ್ನು ಅಳವಡಿಸಬೇಕು. ನಗರಸಭೆಗೆ ಸೇರಿದ ಕೊಳವೆಬಾವಿ ಗುರುತಿಸಿ ನೀರು ಇರುವ ಬೋರ್ ವೆಲ್‌ಗೆ ಹಸಿರು ಮತ್ತು ನೀರಿಲ್ಲದವುಗಳಿಗೆ ಕೆಂಪು ಬಣ್ಣ ಬಳಿಯಲು ಜಿಲ್ಲಾಧಿಕಾರಿ ನಗರಸಭೆಯ ಅಧಿಕಾರಿಗೆ ಸೂಚಿಸಿದರು.

ನಗರಸಭೆ ಕಾರ್ಯಪಾಲಕ ಇಂಜಿನಿಯರ್ ಗಂಗಾಧರ್‌ಇದ್ದರು.

ಅವೈಜ್ಞಾನಿಕ ಮ್ಯಾನ್‌ಹೋಲ್: ಸಾರ್ವಜನಿಕರ ಆಕ್ರೋಶ

ಕೋಲಾರ 10ನೇ ವಾರ್ಡಿನಲ್ಲಿ ಹೊಸ ಮ್ಯಾನ್‌ಹೋಲ್ ಅಳವಡಿಕೆ | ಸರಿಪಡಿಸಲು ಸ್ಥಳೀಯರ ಒತ್ತಾಯ

• **ಕನ್ನಡಪ್ರಭ ವಾರ್ತೆ** ಕೋಲಾರ

ನಗರಸಭೆ ವ್ಯಾಪ್ತಿಗೆ ಸೇರಿದ 10ನೇ ವಾರ್ಡಿನಲ್ಲಿ ಇತ್ತೀಚೆಗೆ ಮಾಡಲಾಗಿರುವ ಸಿಮೆಂಟ್ ರಸ್ತೆಗಳಲ್ಲಿ ಯು.ಜಿ.ಡಿ.ಗಳಿಗೆ ಹೊಂದಿ ಕೊಂಡಂತೆ ಇರುವ ಹೊಸದಾಗಿ ಅಳವಡಿಸಲಾಗುತ್ತಿರುವ ಮ್ಯಾನ್ ಹೋಲ್‌ಗಳು ರಸ್ತೆಗೆ ಸಮನಾಗಿ ಕಾಮಗಾರಿ ಮಾಡದೆ ಅವೈಜ್ಞಾವಾಗಿ ಮಾಡಿರುವುದರಿಂದ ವಾಹನಗಳ ಸಂಚಾರಕ್ಕೆ ಅಡಚಣೆಯಾಗಿದೆ ಎಂದು ಸಾರ್ವಜನಿಕರು ದೂರಿದ್ದಾರೆ.

ಕೋಟ್ಯಂತರ ರುಪಾಯಿ ವೆಚ್ಚ ಮಾಡಿ ನಗರದಲ್ಲಿ ಸಿಮೆಂಟ್ ರಸ್ತೆಗಳು ಯು.ಜಿ.ಡಿ. ಪೈಪ್ ಹಾಗೂ ಮ್ಯಾನ್ ಹೋಲ್ ಅಳವಡಿಕೆ ಕಾಮಗಾರಿ ಮಾಡಲಾಗುತ್ತಿದೆ. ಆದರೆ ಈ ಕಾಮಗಾರಿಯ ಗುಣಮಟ್ಟ ಪರಿಶೀಲಿಸಬೇಕೆಂಬ ಕಾಳಜಿಯು ಜನಪ್ರತಿನಿಧಿಗಳಲ್ಲಾಗಲಿ. ಅಧಿಕಾರಿಗಳಲ್ಲಾಗಲಿ ಇಲ್ಲದೆ ಇರುವುದು ಬೇಜವಾಬ್ದಾರಿಯ ಪರಮಾವಧಿಗೆ ಸಾಕ್ಷೀಕರಿಸಲಿದೆ.



ಕೋಲಾರದ 10ನೇ ವಾರ್ಡಿನಲ್ಲಿ ಹೊಸ ಮ್ಯಾನ್ ಆಳವಡಿಕೆ ಅವೈಜ್ಞಾನಿಕವಾಗಿ ನಿರ್ಮಾಣ ಮಾಡಿರುವುದು.

ಮಾನ್ ಹೋಲ್‌ಗಳು ರಸ್ತೆಯ ಮಧ್ಯ ಭಾಗದಲ್ಲಿ ರಸ್ತೆಯ ಮಟ್ಟಕ್ಕಿಂತ ಎತ್ತರವಾಗಿದ್ದು, ವಾಹನಗಳು ಸಂಚಾರಕ್ಕೆ ಅಪಾಯ ಕಟ್ಟಿಟ್ಟ ಬುತ್ತಿಯಾಗಿದೆ. ಇಂದಲ್ಲಾ ನಾಳೆಯಾದರೂ ವಾಹನಗಳ ಅಪಘಾತವಾಗುವ ಸಾಧ್ಯತೆ ಇದೆ. ಇದರಿಂದ ವಾಹನ ಸವಾರರು ಅಥವಾ ಸಾರ್ವಜನಿಕರ ಜೀವಕ್ಕೆ ಸಂಚಕಾರ ಒದಗಲಿದೆ. ಯಾವುದೇ ಅನಾಹುತಗಳು ಸಂಭವಿಸುವ ಮುನ್ನವೇ ಮ್ಯಾನ್ ಹೋಲ್‌ಗಳನ್ನು ಸಮರ್ಪಕವಾಗಿ ಅಳವಡಿಸಿ ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನುವುಂಟು ಮಾಡಬೇಕಾಗಿದೆ ಎಂಬುವುದು ಸಾರ್ವಜನಿಕರ ಒತ್ತಾಯವಾಗಿದೆ.

ಮಾವು ಬೆಳೆಗಾರರಿಗೆ ನಷ್ಟ ಪರಿಹಾರ ನೀಡಲು ಮನವಿ

ಕೆಜಿಎಫ್: ತಾಲೂಕಿನಲ್ಲಿ ಇತ್ತೀಚೆಗೆ ಸುರಿದ ಭಾರೀ ಮಳೆ ಬಿರುಗಾಳಿ ಮತ್ತು ಅಲ್ಲಿಕಲ್ಲು ಮಳೆಯಿಂದಾಗಿ ತಾಲೂಕಿನಲ್ಲಿ 500 ಎಕರೆ ಮಾವು ಮತ್ತು ಬಾಳೆ ಬೆಳೆಗಳು ನಷ್ಟವಾಗಿದ್ದು, ರೈತರು ಸಂಕಷ್ಟ ಪರಿಸ್ಥಿತಿಯನ್ನು ಎದುರಿಸುತ್ತಿದ್ದಾರೆ. ಮಳೆಯಿಂದ ನಷ್ಟಕ್ಕೆ ಒಳಗಾಗಿರುವ ರೈತರಿಗೆ ಬೆಳೆ ನಷ್ಟ ಪರಿಹಾರ ನೀಡುವಂತೆ ತಾಲೂಕು ಮಾವು ಬೆಳೆಗಾರರ ಕ್ಷೇಮಾಭಿವೃದ್ಧಿ ಸಂಘ ತಹಸೀಲ್ದಾರ್ ಭರತ್ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದಾರೆ.

ಮಾವು ಬೆಳೆಗಾರರ ಕ್ಷೇಮಾಭಿವೃದ್ಧಿ ಸಂಘದ ತಾಲೂಕು ಅಧ್ಯಕ್ಷ ಅಭಿಲಾಷ ರೆಡ್ಡಿ ಮಾತನಾಡಿ, ಕ್ಯಾಸಂಬಳ್ಳಿ ಹೋಬಳಿ ಜಕ್ಕರಸಕುಪ್ಪ, ಕಂಗಾಂಡ್ಲಹಳ್ಳಿ, ಶ್ರೀನಿವಾಸಸಂದ್ರ ಗ್ರಾಮ ಪಂಚಾಯಿತಿ ವ್ಯಾಪ್ತಿ ಸೇರಿದಂತೆ ತಾಲೂಕಿನ ವಿವಿಧ ಪಂಚಾಯಿತಿಗಳಲ್ಲಿ ಸರಿ ಸುಮಾರು 2 ಸಾವಿರ ಎಕರೆ ಪ್ರದೇಶದಲ್ಲಿ ಮಾವು ಬೆಳೆ ಇದ್ದು 4 ಸಾವಿರ ಕುಟುಂಬಗಳು ಮಾವು ಬೆಳೆಯನ್ನೇ ಅವಲಂಭಿತರಾಗಿದ್ದಾರೆ.



ಮಾವು ಬೆಳೆಗಾರರಿಗೆ ನಷ್ಟ ಪರಿಹಾರ ವಿತರಿಸಬೇಕು ಎಂದು ತಹಸೀಲ್ದಾರ್ ಭರತ್ ಅವರಿಗೆ ಮನವಿ ಪತ್ರವನ್ನು ಸಲ್ಲಿಸಿದರು.

ಹಿಂದೆ ಮಾವು ಬೆಳೆಯನ್ನು ಖಾಸಗಿ ವ್ಯಕ್ತಿಗಳಿಗೆ ಗುತ್ತಿಗೆ ನೀಡುತ್ತಿದ್ದರು. ಇತ್ತೀಚೆಗೆ ರೈತರೇ ನಿರ್ವಹಣೆ ಮಾಡುತ್ತಿದ್ದು ಪ್ರತಿ ಎಕರೆ ನಿರ್ವಹಣೆಗಾಗಿ ಕನಿಷ್ಠ ಪಕ್ಷ 50 ಸಾವಿರ ರು.ಗಳು ವೆಚ್ಚವಾಗಲಿದೆ. ಇದೀಗ ಅತಿವೃಷ್ಟಿಯಿಂದ ಬೆಳೆ ನಷ್ಟವಾಗಿದ್ದು, ಮಾವು ಬೆಳೆದ ರೈತರಿಗೆ ಕನಿಷ್ಟ ಪಕ್ಷ ಎಕರೆಗೆ 50 ಸಾವಿರ ನಷ್ಟ ಪರಿಹಾರವನ್ನು ಸರ್ಕಾರ ನೀಡಬೇಕೆಂದು ಮನವಿ ಮಾಡಿದರು.

ಈಗಾಗಲೇ ಕಂದಾಯ ಅಧಿಕಾರಿಗಳು ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿದ್ದು ವಾಸ್ತವಂಶ ಪರಿಸ್ಥಿತಿಯನ್ನು ಸರ್ಕಾರಕ್ಕೆ ನೀಡಬೇಕು. ಸರ್ಕಾರ ರೈತರ ಸಂಕಟಕ್ಕೆ ಬರದಿದ್ದಾರೆ ಹೋರಾಟಕ್ಕೆ ಮಾಡಲು ಚಿಂತನೆ ನಡೆಸಲಾಗುವುದು ಎಂದು ತಿಳಿಸಿದರು.

ಈ ವೇಳೆ ಮುಖಂಡರಾದ ವಕೀಲ ರಾಮಚಂದ್ರ ಹಾಗೂ ಇತರರು ಹಾಜರಿದ್ದರು.

ಅಣ್ಣೆ ಫಾತಿಮಾ ಶಿಕ್ಷಕರ ತರಬೇತಿ ಸಂಸ್ಥೆಯ ಗುರು ಶಿಷ್ಯರ ಸಮಾಗಮ



ಅಣ್ಣೆ ಫಾತಿಮಾ ಶಿಕ್ಷಕರ ತರಬೇತಿ ಸಂಸ್ಥೆಯ ಗುರು ಶಿಷ್ಯರ ಸಮಾಗಮ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಗೌರಿಬಿದನೂರು: ಪಟ್ಟಣದ ಮುನೇಶ್ವರ ಬಡಾವಣೆಯ ತೀರ್ಥ ಶಾಲೆಯಲ್ಲಿ ಅಣ್ಣೆ ಫಾತಿಮಾ ಶಿಕ್ಷಕರ ತರಬೇತಿ ಸಂಸ್ಥೆಯ ಗುರು ಶಿಷ್ಯರ ಸಮಾಗಮ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಪ್ರಾಂಶುಪಾಲರಾಗಿ ಕೆಲಸ ನಿರ್ವಹಿಸಿದ್ದ ಪ್ರೊ. ಕೆ.ವಿ. ಪ್ರಕಾಶ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಗುರು ಶಿಷ್ಯರ ಪರಂಪರೆ ಹೀಗೆ ಮುಂದುವರೆಯಬೇಕು. ತಾವುಗಳು ಸಂಸ್ಥೆಯಿಂದ ಪಡೆದಿರುವ ಮೌಲ್ಯಯುತ ಶಿಕ್ಷಣ ಮತ್ತು ಸಂಸ್ಕಾರವನ್ನು ಸಮಾಜಕ್ಕೆ ನೀಡಬೇಕು ಎಂದರು.

ಉಪನ್ಯಾಸಕರಾದ ನಾಗಭೂಷಣ್ ರೆಡ್ಡಿ ಮಾತನಾಡಿ, ಗುರು ಹಿರಿಯರ ಆಶೀರ್ವಾದಗಳೊಂದಿಗೆ ತಮ್ಮ ಜೀವನವನ್ನು ಸಾರ್ಥಕ ಮಾಡಿಕೊಂಡಿದ್ದಕ್ಕೆ ನಮಗೆ ತುಂಬಾ ಸಂತೋಷವಾಗಿದೆ ಎಂದರು.

ಉಪನ್ಯಾಸಕರಾದ ಲಕ್ಷ್ಮಣ್ ಮೂರ್ತಿ, ಉಪನ್ಯಾಸಕರಾದ ಸಿದ್ದಯ್ಯ ಮತ್ತು ನವೀನ್ ಕುಮಾರ್‌ಮಾತನಾಡಿದರು. ಕಾರ್ಯಕ್ರಮದಲ್ಲಿ ಉಪನ್ಯಾಸಕಿ ಎಂ. ಶೋಭಾ, ಸಹಾಯಕಿ ಉಡುಮಲೋಡು ಲಲಿತಮ್ಮ, ಹಿರಿಯ ವಿದ್ಯಾರ್ಥಿಗಳಾದ ಮಂಜುನಾಥ್, ಗಂಗಪ್ಪ,ರವಿಕುಮಾರ್, ಶಿವಶಂಕರ್, ಕಡಬೂರು ಗೌರಿ, ನಾಗಮಣಿ ಪವಿತ್ರಾ, ಶರ್ಮಾ, ಸುನಿಲ್ ಕುಮಾರ್, ನಂದೀಶ್, ರಾಮಚಂದ್ರ, ಜಯಣ್ಣ, ಕೆಂಪರಾಜ್ ಉಪಸ್ಥಿತರಿದ್ದರು.

'ಮಕ್ಕಳನ್ನು ಪ್ರಕೃತಿಯ ಜತೆ ಬೆಳೆಸಿ'



ಕೋಲಾರದ ಜಯನಗರದ ಅಂಬೇಡ್ಕರ್ ಉದ್ಯಾನವನದಲ್ಲಿ ಕೋಲಾರ ಕ್ರೀಡಾ ಸಂಘದ ಸತತ 39 ನೇ ವರ್ಷದ ಬೇಸಿಗೆ ತರಬೇತಿ ಶಿಬಿರದ ಸಮಾರೋಪ ಸಮಾರಂಭ ನಡೆಯಿತು.

ಕೋಲಾರ: ಮಕ್ಕಳನ್ನು ಪ್ರಕೃತಿ ಜೊತೆ ಬೆಳೆಸಬೇಕು. ಪರಿಸರ ಸಂರಕ್ಷಣೆ, ನಿಸರ್ಗದ ಮಹತ್ವ ಅರಿವು ಮೂಡಿಸಿ, ಅವರಿಗೆ ಸಂಸ್ಕಾರ, ಸಂಸ್ಕೃತಿಯ ಅರಿವು ನೀಡಿ ಸಮಾಜಮುಖಿಯಾಗಿ ಮುನ್ನಡೆಸಲು ಇಂತಹ ಬೇಸಿಗೆ ಶಿಬಿರಗಳು ಸಹಕಾರಿ ಎಂದು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಖಜಾಂಚಿ ರಾಜೇಂದ್ರಸಿಂಹ ತಿಳಿಸಿದರು.

ನಗರದ ಜಯನಗರದ ಅಂಬೇಡ್ಕರ್‌ಉದ್ಯಾನವನದಲ್ಲಿ ನಡೆದ ಕೋಲಾರ ಕ್ರೀಡಾ ಸಂಘದ ಸತತ 39ನೇ ವರ್ಷದ ಬೇಸಿಗೆ ತರಬೇತಿ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮಾತನಾಡಿ, ಇಂದು ಮಕ್ಕಳನ್ನು ಅಂಕಗಳಿಗೆ ಸೀಮಿತ ಮಾಡುತ್ತಿದ್ದೇವೆ, ಅವರಲ್ಲಿ ನೈತಿಕ ಮೌಲ್ಯಗಳನ್ನು ಬೆಳೆಸಬೇಕು, ಆರೋಗ್ಯವಂತರನ್ನಾಗಿಸಲು ಅಗತ್ಯವಾದ ಕ್ರೀಡಾ ಮನೋಭಾವ ಬೆಳೆಸಬೇಕು ಎಂಬುದನ್ನೇ ಮರೆತಿದ್ದೇವೆ ಎಂದರು.

ಹಿರಿಯ ಕ್ರೀಡಾಪಟು ಅಂಚೆ ಅಶ್ವಥ್ ಮಾತನಾಡಿ, ಮಕ್ಕಳಿಗೆ ಸರ್ವಾಂಗೀಣ ಶಿಕ್ಷಣ ಇಂದಿನ ಅಗತ್ಯವಾಗಿದೆ, ಕ್ರೀಡೆಗಳಲ್ಲಿ ಅವರಿಗೆ ಆಸಕ್ತಿ ಇದ್ದರೂ ಪೋಷಕರು ಅವರನ್ನು ಭಾಗವಹಿಸಲು ಅವಕಾಶ ನೀಡುವುದಿಲ್ಲ ಎಂದರು.

ನಗರಸಭೆ ಮಾಜಿ ಉಪಾಧ್ಯಕ್ಷ ಎಸ್.ಆರ್.ಮುರಳಿಗೌಡ ಮಾತನಾಡಿದರು. ಅಧ್ಯಕ್ಷತೆ ಕ್ರೀಡಾಸಂಘದ ಅಧ್ಯಕ್ಷ ಸಾ.ಮಾ. ಅನಿಲ್‌ಬಾಬು ವಹಿಸಿದ್ದರು. ಜಿಲ್ಲಾ ನೌಕರರ ಸಂಘದ ನಿಕಟಪೂರ್ವ ಖಜಾಂಚಿ ವಿಜಯ್, ಹಿರಿಯ ಕ್ರೀಡಾಪಟು ಪುರುಷೋತ್ತಮ್, ಸತ್ಯನಾರಾಯಣ ಜ್ಯೂವೆಲರ್ಸ್‌ನ ವೆಂಕಟೇಶ್, ಪ್ರಭಾಕರ್‌ಫೈನಾನ್ಸ್ ಮಾಲೀಕರಾದ ಪವನ್, ತೋಟಗಾರಿಕಾ ಮಹಾವಿದ್ಯಾಲಯದ ಪರಮೇಶ್ವರ್, ತರಬೇತುದಾರರಾದ ಕೃಷ್ಣಮೂರ್ತಿ, ಸುರೇಶ್ ಬಾಬು, ಆನಂದ್, ಕೃಷ್ಣ, ನಾಗೇಶ್ ಹಾಗೂ ಮಕ್ಕಳ ಪೋಷಕರು ಇದ್ದರು. ಶಿಬಿರಾರ್ಥಿಗಳಾದ ಪೂರ್ವಿಕಾ ನಿರೂಪಿಸಿ, ರಕ್ಷಿತಾ ವಂದಿಸಿದರು.

ರೈತರ ಧರಣಿ | ವಾಣಿಜ್ಯ ಸಿಲಿಂಡರ್ ಬೆಲೆಯನ್ನು ಇಳಿಕೆ ಮಾಡುವಂತೆ ರೈತ ಸಂಘದಿಂದ ಪ್ರತಿಭಟನೆ

ಕಾಮಸಮುದ್ರ ಬಳಿ ರೈಲ್ವೆ ಮೇಲ್ಸೇತುವೆ ನಿರ್ಮಿಸಲು ಆಗ್ರಹ

• **ಕನ್ನಡಪ್ರಭ ವಾರ್ತೆ** ಬಂಗಾರಪೇಟೆ

ತಾಲೂಕಿನ ಕಾಮಸಮುದ್ರ ರೈಲ್ವೆ ಗೇಟ್ ಬಳಿ ಮೇಲುಸೇತುವೆ ನಿರ್ಮಾಣ ಮಾಡಿ ವಾಹನ ಸವಾರರಿಗೆ ಉಂಟಾಗುತ್ತಿರುವ ಕಿರಿಕಿರಿಯನ್ನು ತಪ್ಪಿಸಬೇಕು ಹಾಗೂ ಏರಿಕೆಯಾಗಿರುವ ವಾಣಿಜ್ಯ ಸಿಲಿಂಡರ್‌ಬೆಲೆಯನ್ನು ಇಳಿಕೆ ಮಾಡಬೇಕೆಂದು ಒತ್ತಾಯಿಸಿ ರೈತ ಸಂಘದಿಂದ ರೈಲ್ವೆಗೇಟ್ ಮುಂದೆ ಖಾಲಿ ಸಿಲಿಂಡರ್‌ಗಳನ್ನು ಪ್ರದರ್ಶಿಸಿ ಪ್ರತಿಭಟಿಸಿದರು.

ಕಾಮಸಮುದ್ರ ಹೋಬಳಿಯಲ್ಲಿ ಕಾಡಾನೆಗಳ ಹಾವಳಿಯಿಂದ ತತ್ತರಿಸಿರುವ ಗಡಿಭಾಗದ ರೈತ ಕೂಲಿಕಾರ್ಮಿಕರು ಹಾಗೂ ಜನಸಾಮಾನ್ಯರ ದಶಕಗಳ ಬೇಡಿಕೆಯಾಗಿರುವ ಕಾಮಸಮುದ್ರ ರೈಲ್ವೆಗೇಟ್‌ಬಳಿಮೇಲ್ಸೇತುವೆಯನ್ನು ಅಭಿವೃದ್ಧಿಪಡಿಸಲು ಅಗತ್ಯವಿರುವ ಭೂಮಿಯನ್ನು ರೈತರ ಮನವೊಲಿಸಿ ಭೂಸ್ವಾಧೀನ ಮಾಡಿಕೊಂಡು ರೈತರಿಗೆ ಪರಿಹಾರ ನೀಡಿ ಸೇತುವೆಗೆ ಅವಶ್ಯಕತೆ ಇರುವ 30 ಕೋಟಿ ಅನುದಾನವನ್ನು ಬಿಡುಗಡೆ ಮಾಡಬೇಕು.



ಬಂಗಾರಪೇಟೆ ತಾಲೂಕಿನ ಕಾಮಸಮುದ್ರ ಗೇಟ್ ಬಳಿ ರೈಲ್ವೆ ಮೇಲ್ಸೇತುವೆ ನಿರ್ಮಾಣಕ್ಕೆ ಆಗ್ರಹಿಸಿ ರೈತ ಸಂಘದಿಂದ ಪ್ರತಿಭಟನೆ ಮಾಡಿದರು.

ಪ್ರತಿ ದಿನ ಜನ ಸಾಮಾನ್ಯರು, ವಾಹನ ಸವಾರರು ಪಡುತ್ತಿರುವ ಸಮಸ್ಯೆಗೆ ಅಂತ್ಯ ಹಾಡಬೇಕೆಂದರು.

ಮಳೆ ಬಂದರೆ ಮಳೆಯಲ್ಲಿ ನೆನೆಯಬೇಕಾಗುತ್ತದೆ. ಬೇಸಿಗೆ ಬಂದರೆ ಬಿಸಿಲಿನಲ್ಲಿ ಒಣಗಿ ಧೂಳಿನಿಂದ ಆರೋಗ್ಯವಾಗಿರುವ ವಾಹನ ಸವಾರರು ಅನಾರೋಗ್ಯ ಪೀಡಿತರಾಗುತ್ತಿದ್ದರೂ ಸಮಸ್ಯೆಯನ್ನು ಸ್ಥಳೀಯ ಸಂಸದರು ಹಾಗೂ ರೈಲ್ವೆ ಅಧಿಕಾರಿಗಳು ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸುತ್ತಿಲ್ಲ. ಪ್ರತಿದಿನ ಚೆನ್ನೈ, ಬೆಂಗಳೂರಿಗೆ ಸಂಪರ್ಕ ಕಲ್ಪಿಸುವ ಕಾಮಸಮುದ್ರ ರೈಲ್ವೆ ಗೇಟ್‌ನ್ನು ಪ್ರತಿ 20 ನಿಮಿಷಕ್ಕೆ ಮುಚ್ಚುವುದರಿಂದ ವಾಹನ ಸವಾರರಿಗೆ ಹಾಗೂ ತುರ್ತು ಪರಿಸ್ಥಿತಿಯಲ್ಲಿ ಆ್ಯಂಬುಲೆನ್ಸ್ ಹಾಗೂ ವಿದ್ಯಾರ್ಥಿಗಳಿಗೆ, ರೈತರಿಗೆ ತೊಂದರೆಯಾಗುತ್ತಿದ್ದು, ಸಮಸ್ಯೆಗೆ ರೈಲ್ವೆ ಮಂತ್ರಿಗಳು ಶಾಶ್ವತ ಪರಿಹಾರ ನೀಡಬೇಕೆಂದು ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ.ನಾರಾಯಣಗೌಡ ಒತ್ತಾಯಿಸಿದರು.

ಕೇಂದ್ರ ಸರ್ಕಾರದ ಅಧೀನದಲ್ಲಿರುವ ರೈಲ್ವೆ ಇಲಾಖೆ ಭ್ರಷ್ಟಾಚಾರದ ಕೂಪವಾಗಿದೆ. ರೈಲ್ವೆ ನಿಲ್ದಾಣಗಳಲ್ಲಿ ಮೂಲಭೂತ ಸೌಕರ್ಯಗಳ ಸಮಸ್ಯೆಯ ಜೊತೆಗೆ ರೈಲುಗಳಲ್ಲಿ ಪ್ರಯಾಣ ಮಾಡುವ ಪ್ರಯಾಣಿಕರಿಗೆ ಶುದ್ಧ ಕುಡಿಯುವ ನೀರು, ಶೌಚಾಲಯದ ಸ್ವಚ್ಛತೆ ಹಾಗೂ ಗುಣಮಟ್ಟದ ಊಟವಿಲ್ಲದೆ ಪರದಾಡಬೇಕಾದ ಪರಿಸ್ಥಿತಿಯ ಜೊತೆಗೆ ತುರ್ತು ಪರಿಸ್ಥಿತಿಯಲ್ಲಿ ಸಮಸ್ಯೆಯ ಬಗ್ಗೆ ಕರೆ ಮಾಡಲು ಇರುವ ಟೋಲ್ ಫ್ರೀ ನಂಬರ್‌ಇದ್ದು, ಇಲ್ಲದಂತಾಗಿದೆ. ರೈಲುಗಳಲ್ಲಿ ದೂರದ ಪ್ರಯಾಣ ಮಾಡುವ ಪ್ರಯಾಣಿಕರು ಜೀವ ಭಯದಲ್ಲಿ ಸಂಚಾರ ಮಾಡಬೇಕಾದ ಪರಿಸ್ಥಿತಿ ಇದ್ದು, ಸಮಸ್ಯೆಯನ್ನು ಗಂಭೀರವಾಗಿ ಅಧಿಕಾರಿಗಳು ಪರಿಗಣಿಸಬೇಕೆಂದು ಆಗ್ರಹಿಸಿದರು.

ತಾಲೂಕು ಅಧ್ಯಕ್ಷ ಕದರಿನ ಅಪ್ಪೋಜಿರಾವ್ ಮಾತನಾಡಿ, ಕೊಲ್ಲಿ ದೇಶಗಳ ಯುದ್ಧದ ನೆಪದಲ್ಲಿ ಕಚ್ಚಾವಸ್ತುಗಳು ಸಿಗುತ್ತಿಲ್ಲವೆಂದು ಕೇಂದ್ರ ಸರ್ಕಾರ ವಾಣಿಜ್ಯ ಸಿಲಿಂಡರ್‌ಗಳ ಬೆಲೆಯನ್ನು ದಿಢೀರನೆ 993 ಏರಿಕೆ ಮಾಡಿದ್ದು, ಹೋಟೆಲ್ ಉದ್ಯಮಗಳು ಮುಚ್ಚುವ ಪರಿಸ್ಥಿತಿ ಬಂದಿದೆ. ಆದರೆ ಬೆಲೆ ಏರಿಕೆ ಹೋಟೆಲ್ ಮಾಲೀಕರು ಗ್ರಾಹಕರ ಮೇಲೆ ಬೆಲೆ ಏರಿಕೆ ಮಾಡಿ ಕೇಳಿದರೆ, ಕೇಂದ್ರ ಸರ್ಕಾರದ ಮೇಲೆ ಬೆರಳು ತೋರಿಸುತ್ತಿದ್ದಾರೆ. ಇದರಿಂದ ಜನ ಸಾಮಾನ್ಯರ ಮೇಲೆ ಪರಿಣಾಮ ಬೀರುತ್ತಿತ್ತು. ಕೂಡಲೇ ಕೇಂದ್ರ ಸರ್ಕಾರ ವಾಣಿಜ್ಯ ಸಿಲಿಂಡರ್ ಬೆಲೆಯನ್ನು ಇಳಿಸಬೇಕೆಂದು ಆಗ್ರಹಿಸಿದರು.

ಈ ವೇಳೆ ಜಿಲ್ಲಾ ಅಧ್ಯಕ್ಷ ಈಕಂಬಳ್ಳಿ ಮಂಜುನಾಥ, ಕಾಮಸಮುದ್ರ ಹೋ. ಅಧ್ಯಕ್ಷ ಮುನಿಕೃಷ್ಣ, ವಿಶ್ವ, ಮುನಿರಾಜು, ಸಂತೋಷ, ಲಕ್ಷ್ಮಣ್,ನಾಗರಾಜ. ಮಂಜುನಾಥ, ಗೋವಿಂದಪ್ಪ, ಗುಲ್ಲಟ್ಟಿ ತಿಮ್ಮಣ್ಣ, ಪುತ್ತೇರಿರಾಜು, ಗಿರೀಶ್, ಚಂದ್ರಪ್ಪ, ಬಾಬಾಜಾನ್, ಚಾಂದ್ ಪಾಷ, ಕಿರಣ್, ಶೈಲಜ ರತ್ನಮ ಪವಿತ್ರ ವೆಂಕಟಮ್ಮ ಇದ್ದರು.

ಇಂದು ಮಕ್ಕಳನ್ನು ಅಂಕಗಳಿಗೆ ಸೀಮಿತ ಮಾಡುತ್ತಿದ್ದೇವೆ, ಅವರಲ್ಲಿ ನೈತಿಕ ಮೌಲ್ಯಗಳನ್ನು ಬೆಳೆಸಬೇಕು, ಆರೋಗ್ಯವಂತರನ್ನಾಗಿಸಲು ಅಗತ್ಯವಾದ ಕ್ರೀಡಾ ಮನೋಭಾವ ಬೆಳೆಸಬೇಕು ಎಂಬುದನ್ನೇ ಮರೆತಿದ್ದೇವೆ.

• **ರಾಜೇಂದ್ರಸಿಂಹ,** ಪತ್ರಕರ್ತರ ಸಂಘದ ಖಜಾಂಚಿ

ಕುಡಿಯುವ ನೀರಿನ ಪೂರೈಕೆಯೇ ಆದ್ಯತೆ: ಡಿಸಿ

ಜಿಲ್ಲಾ ಮಟ್ಟದ ವಿಪತ್ತು ನಿರ್ವಹಣಾ ಸಮಿತಿ ಸಭೆ | ನೋಡಲ್ ಅಧಿಕಾರಿಗಳು ಗ್ರಾಮ ಭೇಟಿ ನೀಡಲು ಜಿಲ್ಲಾಧಿಕಾರಿ ಜಿ.ಪ್ರಭು ತಾಕೀತು

• **ಕನ್ನಡಪ್ರಭ ವಾರ್ತೆ** ಚಿಕ್ಕಬಳ್ಳಾಪುರ

ಕುಡಿಯುವ ನೀರಿನ ಪೂರೈಕೆಯ ಕೆಲಸ ಕಾರ್ಯಗಳನ್ನು ಮೊದಲ ಆದ್ಯತೆಯ ಕೆಲಸಗಳೆಂದು ಪರಿಗಣಿಸಿ ಅಭಿಯಾನದ ರೀತಿಯಲ್ಲಿ ಕಾರ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಜಿ.ಪ್ರಭು ತಿಳಿಸಿದರು.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ಜಿಲ್ಲಾ ಮಟ್ಟದ ವಿಪತ್ತು ನಿರ್ವಹಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಕುಡಿಯುವ ನೀರಿನ ಸಮಸ್ಯೆ ಎದುರಾಗಿರುವ ಹೋಬಳಿಗಳಿಗೆ ಒಬ್ಬ ಜಿಲ್ಲಾ ಮಟ್ಟದ ಅಧಿಕಾರಿಯನ್ನು ನೇಮಕ ಮಾಡಲಾಗಿದೆ. ಈ ರೀತಿ ನಿಯೋಜನೆ ಆಗಿರುವ ನೋಡಲ್ ಅಧಿಕಾರಿಗಳು ತಮ್ಮ ಕಾರ್ಯ ವ್ಯಾಪ್ತಿಯ ಗ್ರಾಮಗಳಿಗೆ ವಾರಕ್ಕೆ ಒಂದೆರಡು ಬಾರಿ ಖುದ್ದಾಗಿ ಭೇಟಿ ನೀಡಬೇಕು. ಯಾವ ಯಾವ ಗ್ರಾಮಗಳಿಗೆ ಯಾವ ರೀತಿ ನೀರು ಪೂರೈಸಲಾಗುತ್ತಿದೆ ಎಂದರು.

ಖಾಸಗಿ ಕೊಳವೆ ಬಾವಿಗಳು ಎಷ್ಟಿವೆ. ಟ್ಯಾಂಕರ್ ಮೂಲಕ ನೀರು ಪೂರೈಸಲಾಗುತ್ತಿದೆಯೇ ಎಂಬುದನ್ನು ಕೂಲಂಕಷವಾಗಿ ಪರಿಶೀಲಿಸಬೇಕು. ಒಂದು ವೇಳೆ ಕುಡಿಯುವ ನೀರಿನ ಸಮಸ್ಯೆಯ ಭೀಕರತೆ ಹೆಚ್ಚಾದಲ್ಲಿ ಏನೆಲ್ಲಾ ಕ್ರಮಗಳನ್ನು ಕೈಗೊಳ್ಳಬೇಕು ಎಂಬುದಾಗಿ ಪೂರ್ವ ಯೋಜಿತವಾಗಿ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಬೇಕು. ನೀರುಗಂಟಿಗಳು, ಪಿಡಿಒಗಳು, ತಾಪಂ ಇಒಗಳು ಮತ್ತು ತಹಸೀಲ್ದಾರವರೊಂದಿಗೆ ಸಮಲೋಚಿಸಿ ನೀರಿನ ಪೂರೈಕೆಯಲ್ಲಿ ವ್ಯತ್ಯಯ ಆಗದಂತೆ ಕ್ರಮವಹಿಸಬೇಕು ಎಂದರು.



ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ವಿಪತ್ತು ನಿರ್ವಹಣಾ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಜಿ.ಪ್ರಭು ಮಾತನಾಡಿದರು.

ಹೊಸದಾಗಿ ನೀರಿನ ಸಮಸ್ಯೆ ಯಾವುದೇ ಗ್ರಾಮದಲ್ಲಿ ಎದುರಾದಲ್ಲಿ 24 ಗಂಟೆಯ ಒಳಗಾಗಿ ಪರಿಹರಿಸುವಂತೆ ಸನ್ನದ್ದರಾಗಿರಬೇಕು. ಜೊತೆಗೆ ತಮ್ಮ ಕಾರ್ಯ ವ್ಯಾಪ್ತಿಯ ಗ್ರಾಮಗಳಲ್ಲಿರುವ ಶುದ್ಧ ನೀರಿನ ಘಟಕಗಳೆಷ್ಟು, ಅದರಲ್ಲಿ ಕಾರ್ಯನಿರ್ವಹಣೆಯಲ್ಲಿರುವುದು ಎಷ್ಟು ಮತ್ತು ರಿಪೇರಿಗೆ ಬಂದಿರುವುದು ಎಷ್ಟು ಎಂಬುದರ ಬಗ್ಗೆ ಮಾಹಿತಿ ಪಡೆದು ತಿಳಿಸಬೇಕು ಎಂದು ನೋಡಲ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಯಾವುದೇ ಗ್ರಾಮಗಳಲ್ಲಿನ ಸಾರ್ವಜನಿಕ ಸ್ಥಳಗಳಲ್ಲಿ ಯಾವುದೇ ವ್ಯಕ್ತಿ ಅಥವಾ ಸಂಘ ಸಂಸ್ಥೆಗಳು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಬೇಕಾದರೂ ಸ್ಥಳೀಯ ಗ್ರಾಮ ಪಂಚಾಯಿತಿಯ ಅನುಮತಿಯನ್ನು ಕಡ್ಡಾಯವಾಗಿ ಪಡೆದುಕೊಳ್ಳಬೇಕು. ಈ ನಿಟ್ಟಿನಲ್ಲಿ ಗ್ರಾಮ ಪಂಚಾಯ್ತಿ ಮಟ್ಟದ ಅಧಿಕಾರಿಗಳು, ಸಿಬ್ಬಂದಿ ನಿಗಾ ವಹಿಸುವಂತೆ ಸೂಚನೆ ನೀಡಿದರು.

ಜಲಜೀವನ್ ಮಿಷನ್ ಅಭಿಯಾನದಡಿ ಜಿಲ್ಲೆಯಲ್ಲಿ ಈವರೆಗೆ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ. ಎಷ್ಟು ಯಶಸ್ವಿಯಾಗಿವೆ, ಎಷ್ಟು ವಿದ್ಯುತ್ ಸಂಪರ್ಕ ಪಡೆದಿವೆ. ವಿದ್ಯುತ್ ಸಂಪರ್ಕ ಪಡೆಯಲು ಎಷ್ಟು ಬಾಕಿ ಇವೆ ಎಂಬ ವಿವರವನ್ನು ನೀಡಬೇಕು. ಒಂದೆರಡು ದಿನಗಳಲ್ಲಿ ವಿದ್ಯುತ್ ಸಂಪರ್ಕ ಪಡೆಯಲು ಬಾಕಿ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸಿ ಕೊಳವೆ ಬಾವಿ ನೀರು ಪೂರೈಕೆ ಸೇವೆಯನ್ನು ಜನರಿಗೆ ಮುಕ್ತಗೊಳಿಸಬೇಕು ಎಂದು ಗ್ರಾಮೀಣ ಕುಡಿಯುವ ನೀರು ಪೂರೈಕೆ ಇಲಾಖೆಯ ಕಾರ್ಯಪಾಲಕ ಅಭಿಯಂತರರಿಗೆ ಸೂಚನೆ ನೀಡಿದರು.

ಕಳೆದ ಒಂದೆರಡು ದಿನಗಳಲ್ಲಿ ಜಿಲ್ಲೆಯಲ್ಲಿ ಆಗಿರುವ ಸಣ್ಣ ಪ್ರಮಾಣದ ಗಾಳಿ ಮಳೆಗೆ 48 ಹೆಕ್ಟೇರ್ ಪ್ರದೇಶದ ತೋಟಗಾರಿಕಾ ಬೆಳೆಗಳು ನಾಶವಾಗಿದ್ದು, ಆ ಎಲ್ಲ ಸಂತ್ರಸ್ತ ರೈತರಿಗೆ ಪರಿಹಾರ ನೀಡಲು ಅಗತ್ಯ ಕ್ರಮ ಕೈಗೊಳ್ಳಲು ತೋಟಗಾರಿಕಾ ಇಲಾಖೆಯ ಜಂಟಿ ನಿರ್ದೇಶಕರಿಗೆ ಸೂಚನೆ ನೀಡಿದರು.

ಜಿಲ್ಲೆಯ 32 ಗ್ರಾಮಗಳು, 12 ವಾರ್ಡ್ ಗಳಲ್ಲಿ ಸದ್ಯ ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ. ಮುಂದಿನ ದಿನಗಳಲ್ಲಿ 107 ಗ್ರಾಮಗಳಲ್ಲಿ 20 ವಾರ್ಡ್ ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದು. ಒಟ್ಟಾರೆ ಕುಡಿಯುವ ನೀರಿನ ಪೂರೈಕೆಯ ಕಾರ್ಯಗಳನ್ನು ಮೊದಲ ಆದ್ಯತೆಯಾಗಿ ಪರಿಗಣಿಸಿ ಸಮರೋಪಾದಿಯಲ್ಲಿ ಕಾರ್ಯನಿರ್ವಹಿಸಲು ತಹಸೀಲ್ದಾರ್, ತಾಪಂ ಇಒಗಳು, ಸ್ಥಳೀಯಾಡಳಿತ ಸಂಸ್ಥೆಗಳ ಮುಖ್ಯಸ್ಥರು ಕ್ರಮವಹಿಸಲು ಕಟ್ಟುನಿಟ್ಟಿನ ಸೂಚನೆಗಳನ್ನು ಡಿಸಿ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಎನ್.ಭಾಸ್ಕರ್, ಉಪವಿಭಾಗಾಧಿಕಾರಿ ಡಿ.ಎಚ್.ಅಶ್ವಿನ್, ಜಿಪಂ ಉಪಕಾರ್ಯದರ್ಶಿ ಅತಿಕ್ ಪಾಷಾ ಸೇರಿದಂತೆ ಎಲ್ಲಾ ತಹಸೀಲ್ದಾರರು, ತಾಪಂ ಇಒಗಳು, ಸ್ಥಳೀಯಾಡಳಿತ ಸಂಸ್ಥೆಗಳ ಪೌರಾಯುಕ್ತರು, ಮುಖ್ಯಾಧಿಕಾರಿಗಳು ಇದ್ದರು.

ಸುದ್ದಿ ಸಿಂಚನ

ಪ್ರಧಾನಿ ನರೇಂದ್ರ ಮೋದಿ ನಾಯಕತ್ವಕ್ಕೆ ಸಂದ ಜಯ



ಬೇತಮಂಗಲ: ಪಂಚ ರಾಜ್ಯಗಳ ವಿಧಾನಸಭಾ ಚುನಾವಣೆಯಲ್ಲಿ ಮೂರು ಪ್ರಮುಖ ರಾಜ್ಯಗಳಲ್ಲಿ ಬಿಜೆಪಿ ಅಭೂತಪೂರ್ವ ಬಹುಮತ ಗಳಿಸಿರುವುದು ದೇಶದ ಪ್ರಧಾನಿ ಮೋದಿ ಅಭಿವೃದ್ಧಿ ರಾಜಕಾರಣಕ್ಕೆ ಸಂದ ಜಯ ಎಂದು ಗ್ರಾಪಂ ಮಾಜಿ ಅಧ್ಯಕ್ಷ ಮಲ್ಲಹಳ್ಳಿ ವೆಂಕಟಾಚಲಪತಿ ಅಭಿಪ್ರಾಯಪಟ್ಟರು. ಬೇತಮಂಗಲದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಮೂರು ರಾಜ್ಯಗಳ ಮತದಾರರು ಬಿಜೆಪಿಯನ್ನು ಸ್ಪಷ್ಟವಾಗಿ ಬೆಂಬಲಿಸುವ ಮೂಲಕ ಮೋದಿ ಕೈಬಲಪಡಿಸಿದ್ದಾರೆ. ಕೇಂದ್ರ ಸರ್ಕಾರದ ಜನಪರ ಯೋಜನೆಗಳು ಮೋದಿ ಸಮರ್ಥ ನಾಯಕತ್ವದ ಮೇಲೆ ಜನರಿಟ್ಟಿರುವ ನಂಬಿಕೆ ಫಲಿತಾಂಶದಲ್ಲಿ ಪ್ರತಿಫಲಿಸಿದೆ ಎಂದರು. ಮುಂಬರುವ ದಿನಗಳಲ್ಲಿ ದೇಶದ ಅಭಿವೃದ್ಧಿಗೆ ಮತ್ತಷ್ಟು ವೇಗ ನೀಡಲಿದ್ದು, ಮೋದಿ ನಾಯಕತ್ವ ಮತ್ತಷ್ಟು ಗಟ್ಟಿಗೊಳಿಸಿದೆ. ವಿರೋಧ ಪಕ್ಷಗಳ ಅಪಪ್ರಚಾರ ಬದಿಗೊತ್ತಿ, ಜನರು ಅಭಿವೃದ್ಧಿ-ಸುಭದ್ರ ಆಡಳಿತಕ್ಕೆ ಮತ ನೀಡಿದ್ದಾರೆ. ಮುಂಬರುವ ಎಲ್ಲಾ ಚುನಾವಣೆಗಳ ಮೇಲೆಯೂ ಧನಾತ್ಮಕ ಪರಿಣಾಮ ಬೀರಲಿದ್ದು, ದೇಶಾದ್ಯಂತ ಬಿಜೆಪಿ ವಿಜಯ ಯಾತ್ರೆ ಮುಂದುವರಿಯಲಿದೆ ಎಂದರು.

ಮೋದಿಗೆ ಜನಮನ್ನಣೆ: ಜಯಪ್ರಕಾಶ್ ನಾಯ್ಡು



ಬೇತಮಂಗಲ: ಪಶ್ಚಿಮಬಂಗಾಳ, ಪುದುಚೇರಿ ಮತ್ತು ಅಸ್ಸಾಂ ರಾಜ್ಯಗಳ ಚುನಾವಣಾ ಫಲಿತಾಂಶವು ದೇಶದ ಅಭಿವೃದ್ಧಿ ಹಾಗೂ ಪ್ರಧಾನಿ ಮೋದಿ ದಕ್ಷ ಆಡಳಿತಕ್ಕೆ ಸಂದ ಜಯ ಎಂದು ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಜಯಪ್ರಕಾಶ್ ನಾಯ್ಡು ಅಭಿಪ್ರಾಯಪಟ್ಟಿದ್ದಾರೆ. ಬೇತಮಂಗಲದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಈ ರಾಜ್ಯಗಳ ಚುನಾವಣಾ ಫಲಿತಾಂಶದ ಕುರಿತು ಹರ್ಷ ವ್ಯಕ್ತಪಡಿಸಿ, ಅಸ್ಸಾಂ ಮತ್ತು ಪುದುಚೇರಿಯಲ್ಲಿ ಬಿಜೆಪಿ ನೇತೃತ್ವದ ಮೈತ್ರಿಕೂಟಕ್ಕೆ ಜನತೆ ಸ್ಪಷ್ಟ ಬಹುಮತ ನೀಡುವ ಮೂಲಕ ಅಭಿವೃದ್ಧಿಯ ರಾಜಕಾರಣ ಎತ್ತಿ ಹಿಡಿದಿದ್ದಾರೆ. ಮೋದಿ ದೂರದೃಷ್ಟಿಯ ಯೋಜನೆಗಳು ರಾಷ್ಟ್ರ ಮೊದಲು ಎಂಬ ನೀತಿ ಮೆಚ್ಚಿ ದೇಶದ ಮೂಲೆ ಮೂಲೆಯ ಜನತೆ ಬೆಂಬಲಿಸುತ್ತಿದ್ದಾರೆ. ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಸಂಘಟನಾತ್ಮಕವಾಗಿ ಬಲಿಷ್ಠವಾಗಿ ಮುಂದಿನ ದಿನಗಳಲ್ಲಿ ಅಲ್ಲಿನ ಬದಲಾವಣೆಗೆ ಇದು ನಾಂದಿಯಾಗಲಿದೆ. ಜನರಿಂದು ಕೇವಲ ಭರವಸೆಗಳನ್ನು ನಂಬುತ್ತಿಲ್ಲ, ಬದಲಿಗೆ ಕಾರ್ಯ ರೂಪಕ್ಕೆ ಬರುತ್ತಿರುವ ಅಭಿವೃದ್ಧಿ ಕಾರ್ಯಗಳನ್ನು ನೋಡಿ ಮತ ನೀಡುತ್ತಿದ್ದಾರೆ. ಮೋದಿ ನಾಯಕತ್ವದಲ್ಲಿ ದೇಶವು ಸುಭದ್ರವಾಗಿದೆ ಎಂಬ ನಂಬಿಕೆ ಜನರಲ್ಲಿ ದೃಢವಾಗಿದೆ ಎಂದರು.

ಇಂದು ರಾಗಿ ಖರೀದಿ ಪ್ರಕ್ರಿಯೆ ಮುಕ್ತಾಯ

ಚಿಕ್ಕಬಳ್ಳಾಪುರ: ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಶೇ. 90 ಅಥವಾ ಅದಕ್ಕೂ ಹೆಚ್ಚಿನ ಪ್ರಮಾಣದ ರಾಗಿ ಖರೀದಿಯಾಗಿರುವ ಜಿಲ್ಲೆಗಳಲ್ಲಿ ಖರೀದಿ ಪ್ರಕ್ರಿಯೆ ಮೇ 5ರಂದು ಮುಕ್ತಾಯಗೊಳ್ಳಲಿದೆ ಎಂದು ಪ್ರಕಟಣೆ ತಿಳಿಸಿದೆ. ಈ ಸಂಬಂಧ 2025-26ನೇ ಸಾಲಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಜಿಲ್ಲೆಯಲ್ಲಿ 7,392 ರೈತರು 15,742.80 ಮೆ.ಟನ್ ಪ್ರಮಾಣದ ರಾಗಿ ಸರಬರಾಜು ಮಾಡುವುದಾಗಿ ನೋಂದಣಿಯಾಗಿತ್ತು. ಅದರಂತೆ ಜಿಲ್ಲೆಯಲ್ಲಿ ಏಪ್ರಿಲ್ 28ರ ಅಂತ್ಯಕ್ಕೆ 7,106 ರೈತರಿಂದ 14,769.45 ಮೆ.ಟನ್ ಪ್ರಮಾಣದ (ಶೇ.93.82) ರಾಗಿ ಖರೀದಿಸಲಾಗಿದ್ದು, ಉಳಿದಂತೆ 286 ರೈತರಿಂದ ರಾಗಿ ಖರೀದಿಸಲು ಬಾಕಿ ಇದೆ. ಆದ್ದರಿಂದ ಜಿಲ್ಲೆಯಲ್ಲಿ ರಾಗಿ ಸರಬರಾಜು ಮಾಡಲು ಬಾಕಿ ಇರುವ ನೋಂದಾಯಿತ ರೈತರು ಮೇ 5ರೊಳಗಾಗಿ ಸಂಬಂಧಪಟ್ಟ ತಾಲೂಕು ರಾಗಿ ಖರೀದಿ ಕೇಂದ್ರಗಳಿಗೆ ಭೇಟಿ ನೀಡಿ ರಾಗಿ ಸರಬರಾಜು ಮಾಡಲು ಕೋರಿದೆ.

ಸಾರ್ವಜನಿಕ ಆಸ್ಪತ್ರೆಗೆ ವೈದ್ಯರ ನೇಮಕಕ್ಕೆ ಆಗ್ರಹಿಸಿ ಪ್ರತಿಭಟನೆ

ಮೂಲಭೂತ ಸೌಲಭ್ಯ ಒದಗಿಸುವಲ್ಲಿ ಶಾಸಕ ಸುಬ್ಬಾರೆಡ್ಡಿ ವಿಫಲ: ಕೂಲಿಕಾರರ ಸಂಘದ ಜಿಲ್ಲಾ ಕಾರ್ಯದರ್ಶಿ ಸೋಮಶೇಖರ್

• **ಕನ್ನಡಪ್ರಭ ವಾರ್ತೆ** ಬಾಗೇಪಲ್ಲಿ

ಸಾರ್ವಜನಿಕ ಆಸ್ಪತ್ರೆಯಲ್ಲಿ ಮೂಲಭೂತ ಸೌಲಭ್ಯ ಒದಗಿಸಬೇಕು, ವೈದ್ಯರ ಕೊರತೆ ನಿವಾರಣೆ ಹಾಗೂ ಗುಣಮಟ್ಟದ ವೈದ್ಯ ನೀಡಬೇಕು, ವೈದ್ಯರ ಸೇವೆ ಸಿಗದೆ ಮೃತಪಟ್ಟ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಬೇಕು, ಕರ್ತವ್ಯ ಲೋಪವ್ಯಸಗಿದ ವೈದ್ಯರನ್ನು ಸೇವೆಯಿಂದ ಅಮಾನತುಗೊಳಿಸುವಂತೆ ಒತ್ತಾಯಿಸಿ ಕೂಲಿಕಾರರ ಸಂಘ ಹಾಗೂ ಡಿವೈಎಫ್ಐ ನೇತೃತ್ವದಲ್ಲಿ ಸರ್ಕಾರಿ ಆಸ್ಪತ್ರೆ ಮುಂಭಾಗದಲ್ಲಿ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಪ್ರತಿಭಟನಕಾರರನ್ನು ಉದ್ದೇಶಿಸಿ ಮಾತನಾಡಿದ ಕೂಲಿಕಾರರ ಸಂಘದ ಜಿಲ್ಲಾ ಕಾರ್ಯದರ್ಶಿ ಸೋಮಶೇಖರ್, ರೈತರು, ಬಡವರು, ಕೂಲಿಕಾರರೇ ಹೆಚ್ಚು ಸಂಖ್ಯೆಯಲ್ಲಿ ಚಿಕಿತ್ಸೆಗಾಗಿ ಬರುವಂತಹ ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯರ ಕೊರತೆ ನೀಡುವಲ್ಲಿ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸುವಲ್ಲಿ ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಸಂಪೂರ್ಣವಾಗಿ ವಿಫಲರಾಗಿದ್ದಾರೆ ಎಂದು ಆರೋಪಿಸಿದರು.



ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಕೂಲಿಕಾರರ ಸಂಘ ಹಾಗೂ ಡಿವೈಎಫ್ಐ ನೇತೃತ್ವದಲ್ಲಿ ಸರ್ಕಾರಿ ಆಸ್ಪತ್ರೆ ಮುಂಭಾಗದಲ್ಲಿ ಪ್ರತಿಭಟನೆ ನಡೆಸಿದರು.

ಇಲ್ಲಿ ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯ ಸೇವೆಗಳು ಸಿಗದೆ ರೋಗಿಗಳು ಪ್ರಾಣ ಕಳೆದುಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿದೆ. ಕಳೆದ ಹಲವಾರು ವರ್ಷಗಳಿಂದ ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯರ ಕೊರತೆ ಇದೆ. ಸರಿಯಾಗಿ ಔಷಧಿ ಸಿಗುತ್ತಿಲ್ಲ. ಇಲ್ಲಿ ಕುಡಿಯುವ ನೀರು ಸೇರಿದಂತೆ ಮೂಲಭೂತ ಸೌಲಭ್ಯಗಳ ಕೊರತೆ ತಾಂಡವಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬಡವರಿಗೆ ಗುಣಮಟ್ಟದ ವೈದ್ಯ ಒದಗಿಸುವುದು ಸೇರಿದಂತೆ ವೈದ್ಯರ ಕೊರತೆಯಿಂದ ಪ್ರಾಣ ಕಳೆದುಕೊಂಡ ಕುಟುಂಬಗಳಿಗೆ ತಕ್ಷಣ 25 ಲಕ್ಷ ರು.ಗಳ ಪರಿಹಾರ ನೀಡಬೇಕು. ಸರ್ಕಾರಿ ಆಸ್ಪತ್ರೆಯಲ್ಲಿ ಸೇವೆ ಸಲ್ಲಿಸುತ್ತಿರುವ ಬಹುತೇಕ ವೈದ್ಯರು ಖಾಸಗಿ ಕ್ಲಿನಿಕ್‌ಗಳು ಪ್ರಾರಂಭಿಸಿ ಬಡರೋಗಿಗಳಿಂದ ಹಣ ವಸೂಲಿ ಮಾಡುತ್ತಿದ್ದಾರೆ. ಇಷ್ಟೆಲ್ಲಾ ಅವಾಂತರಗಳು ನಡೆಯುತ್ತಿದ್ದರೂ ಜವಾಬ್ದಾರಿ ಹೊತ್ತಬೇಕಾಗಿರುವ ಜಿಲ್ಲಾಧಿಕಾರಿಗಳು, ಶಾಸಕರು ಸೇರಿದಂತೆ ಸಂಬಂಧಪಟ್ಟ ಇಲಾಖೆ ಹಿರಿಯ ಅಧಿಕಾರಿಗಳು ಏಕೆ ಕ್ರಮಕೈಗೊಳ್ಳುತ್ತಿಲ್ಲ ಎಂದು ಪ್ರಶ್ನಿಸಿದರು.

ಜಿಲ್ಲಾ ಮುಖಂಡ ಎಸ್.ರಾಜಶೇಖರ್ ಮಾತನಾಡಿ, ತಾಲೂಕಿನಲ್ಲಿರುವ ಸರ್ಕಾರಿ ಅಧಿಕಾರಿಗಳು ಶಾಸಕರ ಬಾಲಂಗೋಚಿಗಳಂತೆ ವರ್ತನೆ ಮಾಡಿ ಕೂಲಿಕಾರರಿಗೆ, ಬಡವರಿಗೆ ಅನ್ಯಾಯ ಮಾಡುತ್ತಿದ್ದಾರೆ. ಈ ಜಿಲ್ಲೆಯ ಜಿಲ್ಲಾಧಿಕಾರಿಗೆ ರಾಜಕಾರಣಗಳು ಆಯೋಜಿಸುವ ಖಾಸಗಿ ಕಾರ್ಯಗಳಲ್ಲಿ ಭಾಗವಹಿಸಲು ಸಮಯ ಇರುತ್ತೆ, ಜಾತ್ರೆಗೆ ಹೋಗಲು ಸಮಯ ಇದೆ. ಆದರೆ ಅದೇ ರಸ್ತೆಯಲ್ಲಿರುವ ಸರ್ಕಾರಿ ಆಸ್ಪತ್ರೆಗೆ ಬೇಟಿ ನೀಡಿ ಕೂಲಿಕಾರರ ಸಾವಿಗೆ ಕಾರಣ ಏನು ಅಂತಾ ತಿಳಿದುಕೊಳ್ಳಲು ಸಮಯ ಇಲ್ಲವೇ ಎಂದು ಪ್ರಶ್ನಿಸಿದರು

ನಂತರ ಪ್ರತಿಭಟನಕಾರರು ಮೃತರ ಕುಟುಂಬಕ್ಕೆ 25 ಲಕ್ಷ ರು. ಪರಿಹಾರ ನೀಡಿ ಕರ್ತವ್ಯ ಲೋಪ ವ್ಯಸಗಿರುವ ವೈದ್ಯರನ್ನು ಅಮಾನತುಗೊಳಿಸಬೇಕೆಂದು ಒತ್ತಾಯಿಸಿ ಸರ್ಕಾರಿ ಆಸ್ಪತ್ರೆ ಆಡಳಿತಾಧಿಕಾರಿ ವಿನಯ್ ಕುಮಾರ್‌ಗೆ ಮನವಿಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಡಿವೈಎಫ್ಐ ಮುಖಂಡರಾದ ಸುರೇಶ್ ಮದಕರಿ, ವೈ.ಎನ್.ಹರೀಶ್, ಎಂ.ಶ್ರೀನಿವಾಸ್, ಹುಸೇನ್, ಡಿ.ಟಿ.ಮುನಿಸ್ವಾಮಿ, ಈರಪ್ಪ, ನದೀಶ್, ಎಲ್ಲೋಡು ಸೋಮಶೇಖರ್, ಗಣೇಶ್, ಆನಂದ, ರಾಮಾಂಜಿ, ಬಾಬು, ಗಂಗಾಧರ್, ಅಜಯ್, ದೇವಿಕುಂಟೆ ಸೂರಿ, ಗಂಗರಾಜು ಮತ್ತಿತರರು ಇದ್ದರು.

ಸರ್ಕಾರಿ ಆಸ್ಪತ್ರೆಯಲ್ಲಿ ಶಾಸಕರ ಸಭೆ



ಬಾಗೇಪಲ್ಲಿ ಸರ್ಕಾರಿ ಆಸ್ಪತ್ರೆಯಲ್ಲಿ ನಡೆದ ಆರೋಗ್ಯ ರಕ್ಷಾ ಸಮಿತಿ ಸಭೆಯಲ್ಲಿ ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಮಾತನಾಡಿದರು.

ಬಾಗೇಪಲ್ಲಿ: ಆಸ್ಪತ್ರೆಯಲ್ಲಿನ ವೈದ್ಯ, ಸಿಬ್ಬಂದಿ ಕೊರತೆ ಸೇರಿದಂತೆ ಆಸ್ಪತ್ರೆಯಲ್ಲಿನ ವಿವಿಧ ಸಮಸ್ಯೆಗಳ ಬಗ್ಗೆ ಸಾರ್ವಜನಿಕ ಆಸ್ಪತ್ರೆಯ ಆರೋಗ್ಯಾಧಿಕಾರಿ ಕೊಠಡಿಯಲ್ಲಿ ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಅಧ್ಯಕ್ಷತೆಯಲ್ಲಿ ಆರೋಗ್ಯ ರಕ್ಷಾ ಸಮಿತಿ ಸಭೆ ನಡೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಎಸ್.ಎನ್.ಸುಬ್ಬಾರೆಡ್ಡಿ, ಆಸ್ಪತ್ರೆಯ ಅಭಿವೃದ್ಧಿ ಕಾರ್ಯಗಳು, ದಾಖಲಾತಿಗಳು, ಮೂಲಭೂತ ಸೌಕರ್ಯಗಳು, ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಜನಸಾಮಾನ್ಯರಿಗೆ ಸರ್ಕಾರದಿಂದ ಸಿಗುವಂತಹ ಅನೇಕ ಆರೋಗ್ಯ ಸೇವೆಗಳ ಬಗ್ಗೆ ಚರ್ಚಿಸಿ, ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯರು, ಸಿಬ್ಬಂದಿ ಕೊರತೆ ಬಗ್ಗೆ ಆರೋಗ್ಯ ಸಚಿವ, ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಅವರಿಗೆ ಮನವರಿಕೆ ಮಾಡುವುದಲ್ಲದೆ ಖಾಲಿ ಇರುವ ವೈದ್ಯರು, ಆರೋಗ್ಯ ಸಹಾಯಕರು ನರ್ಸ್ ಸೇರಿದಂತೆ ಎಲ್ಲ ಹುದ್ದೆಗಳ ನೇಮಕಕ್ಕೆ ಮನವಿ ಮಾಡುವುದಾಗಿ ತಿಳಿಸಿದ ಅವರು, ಆಸ್ಪತ್ರೆಯಲ್ಲಿ ವೈದ್ಯರು ಮತ್ತು ಸಿಬ್ಬಂದಿ ಎಲ್ಲಾ ರೋಗಿಗಳಿಗೆ ಗುಣಮಟ್ಟದ ಚಿಕಿತ್ಸೆ ನೀಡುವಂತೆ ಹಾಗೂ ಔಷಧಗಳನ್ನು ಸಕಾಲದಲ್ಲಿ ವಿತರಿಸುವಂತೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಪ್ರಭಾರ ತಾಲೂಕು ಆರೋಗ್ಯಾಧಿಕಾರಿ ಡಾ.ಸುಜಿತ್‌ರೆಡ್ಡಿ, ವೈದ್ಯರಾದ ಮುಬಾರಕ್, ಚಂದ್ರಶೇಖರರೆಡ್ಡಿ, ಬಿ.ವೆಂಕಟರವಣ, ಮಧುಸೂದನ್, ಮಧು ಸೇರಿದಂತೆ ಆಸ್ಪತ್ರೆಯ ಆಡಳಿತ ಶಾಖೆಯ ಅಧಿಕಾರಿಗಳು ಇದ್ದರು.

ಗುಜರಿ ವಸ್ತುಗಳನ್ನು ತೆರವುಗೊಳಿಸುವಂತೆ ಡಿವೈಎಸ್‌ಪಿ ಎಚ್ಚರಿಕೆ

ಪಾದಚಾರಿಗಳಿಗೆ ಮತ್ತು ಸುಗಮ ಸಂಚಾರಕ್ಕೆ ಅನಾನೂಕೂಲ | ಚಿಂತಾಮಣಿ ನಗರದಲ್ಲಿ ಗುಜರಿ ವ್ಯಾಪಾರಸ್ಥರ ಸಭೆ

ಚಿಂತಾಮಣಿ: ಗುಜರಿ ವ್ಯಾಪರಸ್ಥರು ಫುಟ್‌ಪಾತ್ ಮತ್ತು ರಸ್ತೆಗಳಿಗೆ ಗುಜರಿ ವಸ್ತುಗಳ ನ್ನಿಟ್ಟು ವ್ಯಾಪಾರ ಮಾಡುತ್ತಿರುವುದು ಕಂಡು ಬರುತ್ತಿದ್ದು, ಇದರಿಂದ ಪಾದಚಾರಿಗಳಿಗೆ ಮತ್ತು ಸುಗಮ ಸಂಚಾರಕ್ಕೆ ಅನಾನೂಕೂಲವಾಗುತ್ತಿದೆ. ಕೂಡಲೇ ವ್ಯಾಪಾರಸ್ಥರು ನಿಗದಿತ ದಿನದೊಳಗೆ ರಸ್ತೆ ಮತ್ತು ಪಾದಾಚಾರಿ ಮಾರ್ಗದಲ್ಲಿ ಇಟ್ಟಿರುವ ಗುಜರಿ ವಸ್ತುಗಳನ್ನು ತೆಗೆಯುವಂತೆ ಡಿವೈಎಸ್‌ಪಿ ಪಿ. ಮುರಳೀಧರ್‌ಖಡಕ್ ಎಚ್ಚರಿಕೆ ನೀಡಿದರು.

ನಗರದ ಪೊಲೀಸ್ ಠಾಣೆ ಆವರಣದಲ್ಲಿ ಗುಜರಿ ವ್ಯಾಪಾರಸ್ಥರ ಸಭೆಯಲ್ಲಿ ಡಿವೈಎಸ್‌ಪಿ ಪಿ. ಮುರಳೀಧರ್‌ ಮಾತನಾಡಿ ಪಾದಾಚಾರಿ ಮಾರ್ಗ, ರಸ್ತೆ ಒತ್ತುವರಿ ಮಾಡಿಕೊಂಡು ಗುಜರಿ ವಸ್ತುಗಳನ್ನು ರಾಶಿ ಹಾಕಿಕೊಂಡಿರುವುದರಿಂದ ಹಲವು ಅಪಘಾತಗಳಿಗೆ ಕಾರಣವಾಗಿದೆ ಎಂದರು.



ನಗರದ ಪೊಲೀಸ್ ಠಾಣೆ ಆವರಣದಲ್ಲಿ ಗುಜರಿ ವ್ಯಾಪಾರಸ್ಥರ ಸಭೆಯಲ್ಲಿ ಡಿವೈಎಸ್‌ಪಿ ಪಿ. ಮುರಳೀಧರ್‌ ಮಾತನಾಡಿದರು.

ಗುಜರಿ ವ್ಯಾಪಾರಸ್ಥರು ಪಂಪ್‌ಸೆಟ್, ಕೇಬಲ್, ಮೋಟರ್‌ಗಳು ಇತ್ಯಾದಿಗಳನ್ನು ಅನಾಮಿಕರಿಂದ ಕೊಂಡುಕೊಳ್ಳುವಾಗ ಪೊಲೀಸರಿಗೆ ಮಾಹಿತಿ ನೀಡಬೇಕು. ಏಕೆಂದರೆ ಸಣ್ಣಪುಟ್ಟ ರೈತರು ಅಳವಡಿಸಿಕೊಂಡಿರುವ ಪಂಪ್‌ಸೆಟ್ ಮತ್ತು ಕೇಬಲ್ ಕಳುವಾದಾಗ ಅವುಗಳನ್ನು ಪುನಃ ಕೊಳ್ಳಲು ತ್ರಾಸದಾಯಕವಾಗುತ್ತದೆ. ಆದ್ದರಿಂದ ಅಂತಹ ಅನಾಮಿಕ ಅಥವಾ ಅನುಮಾನಸ್ಪದ ವ್ಯಕ್ತಿಗಳು ಮಾರಾಟಕ್ಕೆ ಬಂದಾಗ ಪೊಲೀಸರ ಗಮನಕ್ಕೆ ತರುವಂತೆ ತಿಳಿಸಿದರು.

3 ರಾಜ್ಯದಲ್ಲಿ ಬಿಜೆಪಿ ಗೆಲುವು: ವಿಜಯೋತ್ಸವ

ಮಾಲೂರು: ಬಂಗಾಳ, ಅಸ್ಸಾಂ ಹಾಗೂ ಪುದುಚೇರಿಗಳಲ್ಲಿ ಬಿಜೆಪಿ ವಿಜಯಪಥ ತುಳಿದಿರುವ ಹಿನ್ನೆಲೆಯಲ್ಲಿ ಸ್ಥಳೀಯ ಬಿಜೆಪಿ ಕಾರ್ಯಕರ್ತರು ಬಿಜೆಪಿ ಅಧ್ಯಕ್ಷ ಟಿ.ಬಿ.ಕೃಷ್ಣಪ್ಪ ನೇತೃತ್ವದಲ್ಲಿ ನಗರದ ಮಹಾರಾಜ ವೃತ್ತದಲ್ಲಿ ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅಧ್ಯಕ್ಷ ಟಿ.ಬಿ.ಕೃಷ್ಣಪ್ಪ ಮಾತನಾಡಿ, ಇಂದಿನ ಗೆಲವು ಬಿಜೆಪಿಗರ ಮನಸ್ಸಿನಲ್ಲಿ ಚಿರಸ್ಥಾಯಿಯಾಗಿ ಉಳಿಯಲಿದೆ. ಏಕೆಂದರೆ 34 ವರ್ಷ ಕಮ್ಯುನಿಸ್ಟ್ ಹಾಗೂ 15 ವರ್ಷ ದೀದಿ ಕೈನಲ್ಲಿ ಪಶ್ಚಿಮ ಬಂಗಾಳ ನಲುಗಿ ಹೋಗಿತ್ತು. ಅರಾಜಕತೆ, ಗೂಂಡಾಯಿಸಂನಿಂದ ಬಂಗಾಳ ಜನತೆ ಶೋಷಣೆಗೆ ಒಳಗಾಗಿದ್ದರು. ಪ್ರಧಾನಿ ನರೇಂದ್ರ ಮೋದಿ ಅವರ ಚರಿಷ್ಮ ಹಾಗೂ ಅಮಿತ್ ಷಾರ ಚಾಣುಕ್ಯ ನಡೆ ಇಂದು ಬಂಗಾಳ ಜನತೆಗೆ ನಿಜವಾದ ಸ್ವಾತಂತ್ರ್ಯ ತಂದು ಕೊಟ್ಟಿದೆ ಎಂದ ಟಿ.ಬಿ.ಕೆ.ಮುಂದಿನ ಚುನಾವಣೆಯಲ್ಲಿ ನಮ್ಮ ರಾಜ್ಯದಲ್ಲೂ ಕಮಲ ಅರಳಿಸುವ ಮೂಲಕ ಮೋದಿ ಅವರ ಆಶಯವಾ ಗಿರುವ ಕಾಂಗ್ರೆಸ್ ಮುಕ್ತ ದೇಶಕ್ಕೆ ನಾವು ಕಾಣಿಕೆ ನೀಡಲಿದ್ದೇವೆ ಎಂದರು,



ಬಿಜೆಪಿ ವಿಜಯ ಹಿನ್ನೆಲೆಯಲ್ಲಿ ಕಾರ್ಯಕರ್ತರನ್ನು ಉದ್ದೇಶಿಸಿ ಬಿಜೆಪಿ ತಾಲೂಕು ಅಧ್ಯಕ್ಷ ಟಿ.ಬಿ.ಕೃಷ್ಣಪ್ಪ ಮಾತನಾಡಿದರು.

ಬಿಜೆಪಿ ಮುಖಂಡರಾದ ದೊಡ್ಡಿ ರಾಜಪ್ಪ, ವೇಣುಗೋಪಾಲ್, ನಾಗರಾಜ್, ವೇಮನ, ವಾಟರ್ ನಾರಾಯಣಸ್ವಾಮಿ, ಜುಟ್ಟು ಕೃಷ್ಣ, ಬೈರೇಗೌಡ, ಯಾದವ್, ಅಮುದಾ ವೇಣು ಸೇರಿದಂತೆ ನೂರಾರು ಕಾರ್ಯಕರ್ತರಿದ್ದರು.

ಶಿಡ್ಲಘಟ್ಟ: ಬಿಜೆಪಿ ಕಾರ್ಯಕರ್ತರ ವಿಜಯೋತ್ಸವ

ಶಿಡ್ಲಘಟ್ಟ: 2026ರ ಪಂಚ ರಾಜ್ಯಗಳ ವಿಧಾನಸಭಾ ಚುನಾವಣೆಯ ಫಲಿತಾಂಶ ಸೋಮವಾರ ಹೊರಬಿದ್ದಿದ್ದು, ಪಶ್ಚಿಮ ಬಂಗಾಳ, ಪುದುಚೇರಿ ಮತ್ತು ಅಸ್ಸಾಂ ರಾಜ್ಯಗಳಲ್ಲಿ ಬಿಜೆಪಿ ಭರ್ಜರಿ ಗೆಲುವು ಸಾಧಿಸಿರುವ ಹಿನ್ನೆಲೆಯಲ್ಲಿ ಇಲ್ಲಿನ ಬಿಜೆಪಿ ಸೇವಾಸೌಧದ ಮುಂದೆ ಬಿಜೆಪಿ ಕಾರ್ಯಕರ್ತರು ವಿಜಯೋತ್ಸವ ಆಚರಿಸಿದರು.

ಬಿಜೆಪಿ ಗ್ರಾಮಾಂತರ ಮಂಡಲ ಅಧ್ಯಕ್ಷ ಸೀಕಲ್ ಆನಂದ ಗೌಡ ಮಾತನಾಡಿ, ನಮ್ಮ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ದೇಶದ ಅಭಿವೃದ್ಧಿಯ ಕನಸುಗಳು ಈಗ ರೂಪು ಪಡೆಯುತ್ತಿವೆ ಎಂದು ಹೇಳಿದರು.

ಪಶ್ಚಿಮ ಬಂಗಾಳದಲ್ಲಿ ನಾವು ಐತಿಹಾಸಿಕ ವಿಜಯ ಸಾಧಿಸಿದ್ದೇವೆ. ಅಸ್ಸಾಂನಲ್ಲಿ ಮತ್ತು ಪುದುಚೇರಿಯಲ್ಲಿ ನಮ್ಮ ಕಾರ್ಯಕರ್ತರ ಶ್ರಮ ಸಾರ್ಥಕವಾಗಿದೆ. ಇದು ನಮ್ಮ ಪಕ್ಷದ ಶಕ್ತಿ, ಜನತೆಯ ಬೆಂಬಲದ ಸಾಕ್ಷಿ. ಇಂದು ನಾವು ಸಂಭ್ರಮಿಸುತ್ತಿದ್ದೇವೆ, ಆದರೆ ಇದು ಇನ್ನಷ್ಟು ಶ್ರಮದ ಆರಂಭ. ಕರ್ನಾಟಕದ ಭವಿಷ್ಯವನ್ನು ಇಂದಿನ ಚುನಾವಣಾ ಫಲಿತಾಂಶ ಪ್ರತಿಧ್ವನಿಸುತ್ತದೆ ಎಂದರು.



ಶಿಡ್ಲಘಟ್ಟದ ಬಿಜೆಪಿ ಸೇವಾಸೌಧದ ಮುಂದೆ ಬಿಜೆಪಿ ಕಾರ್ಯಕರ್ತರು ವಿಜಯೋತ್ಸವದ ಸಂಭ್ರಮಾಚರಣೆ ನಡೆಸಿದರು.

ಈ ಸಂದರ್ಭದಲ್ಲಿ ಬಿಜೆಪಿ ನಗರ ಮಂಡಲ ಅಧ್ಯಕ್ಷ ದೇವರಾಜ್, ಚೆಲುವರಾಜ್, ಜಯಂತಿಗ್ರಾಮ ನಾರಾಯಣಸ್ವಾಮಿ, ರಾಮಕೃಷ್ಣಪ್ಪ, ಪುರುಷೋತ್ತಮ್, ರಾಮಾಂಜಿ, ಅನಿಲ್ ಹಾಜರಿದ್ದರು.

IN THE SUPREME COURT OF INDIA EXTRA-ORDINARY APPELLATE JURISDICTION
Petition for Special Leave to Appeal (Civil) No(s) 30025-30028 OF 2024
WITH PRAYER FOR INTERIM RELIEF

HARISH KUMAR (DEAD) BY LRS AND OTHERS ....Petitioner(s)
VERSUS
THE STATE OF KARNATAKA AND OTHERS ....Respondent(s)

To,

1 SRI.DALI MUNIYAPPA, AGED ABOUT 65 YEARS, S/O MUNI OBALAPPA, R/A ULLAL VILLAGE, YESHWANTHPURA HOBLI, BENGALURU NORTH TALUK, BENGALURU -560110. KARNATAKA.	**PID: 98100/2026 FOR R[19] IN IN SLP(C) NO. 30025/2024, SLP(C) NO. 30026/ 2024SLP(C) NO.30025-30028/2024 (SEC IV-A)**
2 SMT.B.V. RATHNAMMA, AGED ABOUT 60 YEARS, D/O LATE VENKATARAMAIAH, R/A NO.33, 12TH E CROSS, MAGADI ROAD, BENGALURU-560023., KARNATAKA.	**PID: 98101/2026 FOR R[21] IN IN SLP(C) NO. 30025/2024, SLP(C) NO. 30026/ 2024SLP(C) NO.30025-30028/2024 (SEC IV-A)**
3 SRI.H.CHANDRAKEERTHI, AGED ABOUT 41 YEARS, S/O LATE HANUMAIAH, R/A ULLAL VILLAGE, YESHWANTHPURA HOBLI, BENGALURU NORTH TALUK, BENGALURU-560110, KARNATAKA	**PID: 98102/2026 FOR R[24] IN IN SLP(C) NO. 30025/2024, SLP(C) NO. 30026/ 2024SLP(C) NO.30025-30028/2024 (SEC IV-A)**
4 SMT.PARVATHAMMA, AGED ABOUT 71 YEARS, D/O LATE DASAPPA, RESIDING AT NO.36, ULLALA MAIN ROAD, OPP ULLAL LAKE, BENGALURU-560110, KARNATAKA.	**PID: 98103/2026 FOR R[34] IN IN SLP(C) NO. 30025/2024, SLP© NO. 30026/ 2024SLP(C) NO.30025-30028/2024 (SEC IV-A)**
5 SRI.NARASIMHA MURTHY, S/O LATE PUTTAIAH, AGED ABOUT 55 YEARS RESIDING AT NO.36, ULLALA MAIN ROAD, OPP ULLAL LAKE, BENGALURU-560110, KARNATAKA	**PID: 98104/2026 FOR R[35] IN IN SLP(C) NO. 30025/2024, SLP(C) NO. 30026/2024SLP(C) NO.30025-30028/2024 (SEC IV-A)**
6 SRI.NARASIMHA MURTHY, SON OF LATE MALLAIAH AGED ABOUT 63 YEARS RESIDING AT NO.36, ULLALA MAIN ROAD, OPP ULLAL LAKE, BENGALURU-560110, KARNATAKA	**PID: 98105/2026 FOR R[36] IN IN SLP(C) NO. 30025/2024SLP(C) NO.30025-30028/2024 (SEC IV-A)**
7 V.HARISH KUMAR, S/O LATE M.VENKATARAMAIAH, MAJOR, R/O NO.33, 13TH STREET, AGRAHARA DASARAHALLI, MAGADI ROAD, BANGALORE-560079. KARNATAKA	**PID: 98106/2026 FOR R[60] IN IN SLP(C) NO. 30027/2024SLP(C) NO.30025-30028/2024 (SEC IV-A)**
8 R.SHOBHA, D/O Y.RAMAKRISHNA, W/O M.C. KESHAVAMURTHY, AGED ABOUT 37 YEARS, R/A NO.11/1, 1ST MAIN, 1ST CROSS, VALMIKINAGAR, MYSORE ROAD, BANGALORE-560026 KARNATAKA.	**PID: 98107/2026 FOR R[61] IN IN SLP(C) NO. 30027/2024SLP© NO.30025-30028/2024 (SEC IV-A)**
9 SAROJAMMA, AGED ABOUT 77 YEARS, W/O LATE K.N SRINIVASA GUPTA. RESIDING AT NO.9, 100 FEET ROAD, BANASHANKARI, 2ND STAGE, 4TH BLOCK, BANGALORE-560083. KARNATAKA.	**PID: 98108/2026 FOR R[66] IN IN SLP(C) NO.30028/2024SLP© NO.30025-30028/2024 (SEC IV-A)**
10 SRI. M. S MOHAN KUMAR, ABOUT 60 YEARS, S/O LATE K.N SRINIVASA GUPTA. RESIDING AT NO.9, BANASHANKARI, 2ND STAGE, 100 FEET ROAD, 4TH BLOCK, BANGALORE-560083., KARNATAKA.	**PID: 98109/2026 FOR R[67] IN IN SLP(C) NO. 30028/2024SLP(C) NO.30025-30028/2024 (SEC IV-A)**
11 SRI.K.S. SURENDRA BABU, AGED ABOUT 51 YEARS, S/O LATE K.N SRINIVASA GUPTA.RESIDING AT NO.9, 100 FEET ROAD, BANASHANKARI, 2ND STAGE, 4TH BLOCK, BANGALORE-560083. KARNATAKA	**PID: 98110/2026 FOR R[68] IN IN SLP(C) NO. 30028/2024SLP(C) NO.30025-30028/2024 (SEC IV-A)**
12 SRI.K.S VISHWAKIRAN, AGED ABOUT 46 YEARS, S/O LATE K.N SRINIVASA GUPTA. RESIDING AT NO.9, 100 FEET ROAD, BANASHANKARI, 2ND STAGE, 4TH BLOCK, BANGALORE-560083., KARNATAKA.	**PID: 98111/2026 FOR R[69] IN IN SLP(C) NO.30028/2024SLP© NO.30025-30028/2024 (SEC IV-A)**
13 SRI. R. V. SUDHIR, S/O LATE RAJA VENKATARAMANA SHETTY. RESIDING AT NO.37/55, SURVEYOR ROAD, BASAVANAGUDI, BENGALURU-560004 KARNATAKA.	**PID: 98112/2026 FOR R[72] IN IN SLP(C) NO. 30028/2024SLP© NO.30025-30028/2024 (SEC IV-A)**
14 RUDRA MURTHY S/O H. S. SADASHIVAIAH, R/O ILLALU VILLAGE, YESWANTHAPURA HOBLI BENGALURU NORTH TALUK -560056, KARNATAKA.	**PID: 98113/2026 FOR R[77] IN IN SLP(C) NO.30028/2024SLP© NO.30025-30028/2024 (SEC IV-A)**
15 CHANDRAN S/O LATE NANJUNDAPPA, R/O ILLALU VILLAGE YESWANTHAPURA HOBLI, BENGALURU NORTH TALUK-560056 KARNATAKA	**PID: 98113/2026 FOR R[77] IN IN SLP(C) NO. 30028/2024SLP(C) NO.30025-30028/2024 (SEC IV-A)**
16 NARASAPPA S/O BASAPPA, R/O ILLALU VILLAGE YESWANTHAPURA HOBLI BENGALURU NORTH TALUK - 560056 KARNATAKA	**PID: 98115/2026 FOR R[79] IN IN SLP(C) NO.30028/2024SLP(C) NO.30025-30028/2024 (SEC IV-A)**
17 GANGARAJU S/O NAGARAJU, R/O ILLALU VILLAGE YESWANTHAPURA HOBLI BENGALURU NORTH TALUK – 560056. KARNATAKA	**PID: 98116/2026 FOR R[80] IN IN SLP(C) NO. 30028/2024SLP(C) NO.30025-30028/2024 (SEC IV-A)**
18 MUDDUHAHONNAIAH S/O JAYANNA, R/O ILLALU VILLAGE YESWANTHAPURA HOBLI BENGALURU NORTH TALUK - 560056 KARNATAKA	**PID: 98117/2026 FOR R[81] IN IN SLP(C) NO.30028/2024SLP(C) NO.30025-30028/2024 (SEC IV-A)**
19 CHANDRAPPA S/O LATE RAJAPPA, R/O ILLALU VILLAGE YESWANTHAPURA HOBLI BENGALURU NORTH TALUK – 560056 KARNATAKA	**PID: 98118/2026 FOR R[82] IN IN SLP(C) NO.30028/2024SLP(C) NO.30025-30028/2024 (SEC IV-A)**

WHEREAS the Petition for SPECIAL LEAVE PETITION (CIVIL) to Appeal with application for EXEMPTION FROM FILING O.T., EXEMPTION FROM FILING C/C OF THE IMPUGNED JUDGMENT, CONDONATION OF DELAY IN FILING, DISMISSAL OF APPEAL, INTERVENTION/IMPLEADMENT, EXEMPTION FROM FILING O.T., APPLICATION FOR SUBSTITUTION, EARLY HEARING APPLICATION, PERMISSION TO FILE APPLICATION FOR DIRECTION, EXEMPTION FROM APPOINTMENT OF OFFICIAL TRANSLATOR, PERMISSION TO FILE ADDITIONAL DOCUMENTS/FACTS/ANNEXURES, PERMISSION TO FILE ADDITIONAL DOCUMENTS/FACTS/ANNEXURES, EXEMPTION FROM FILING O.T., PERMISSION TO FILE APPLICATION FOR TO FILE DIRECTION, PERMISSION ADDITIONAL DOCUMENTS/FACTS/ANNEXURES above mentioned (copy enclosed) filed in the Registry by Ms. JAYASREE NARASIMHAN, Advocate on behalf of the Petitioner above named was listed for hearing before this Court on 09th December, 2024 along with the connected matters, when the Court was pleased to inter-alia pass the following order:-
"SPECIAL LEAVE PETITION (CIVIL) DIARY NO.
53577/2024
1.Delay condoned.
2. Issue notice.
3.Till the next date of hearing, the possession of the disputed property shall not be disturbed
WHEREAS, the matter was listed for hearing before this Court on 09th April, 2026 along with the connected matters, when the Court was pleased to pass the following order:-
"1. Mr. Kapil Sibal, learned senior counsel appearing for the State of Karnataka in SLP(C) No. 28248-28258/2024, submits that documents dating back to 1890 have since been traced which would prove the character of the lands in dispute as gomal'. According to him, these documents need to be placed on record since they have a material bearing on the special leave petitions under consideration.
2. Let such additional documents be placed on record by filing an appropriate application within three weeks.
3. Exception to such application may be taken by the petitioners within a week thereafter.
4. We have heard Mr. Debal Banerji, learned senior counsel appearing for K.S. Subbaraju - respondent No.7 in SLP (C) No. 30028/2024 in support of the prayer that the said petition should be dismissed.
5. Considering the submissions made by Mr. Sibal recorded above that the Government has since traced old records to the effect that disputed lands are 'gomal', we are of the considered opinion that the application seeking dismissal of SLP (C) No. 30028/2024 ought to be heard along with the special leave petitions.
6. Re-list the special leave petitions and all connected applications ca 21st May, 2026 at 12:00 noon.
7. Interim order, passed earlier, shall continue till the next date of hearing.
8. The latest office report has been read. Some of the respondents are yet to be served.
9. Fresh steps be taken by the State of Karnataka to effect service through paper publication, within two weeks from date. Notice may be published in one English daily newspaper, viz. Deccan Herald and one Kannada newspaper, viz. Kannada Prabha.
10. Once the paper publications are made, the related documents be filed before the Registry a week prior to the returnable date. Put up an appropriate office report."

NOW, THEREFORE, TAKE NOTICE that the above petition will be posted for hearing before this Court on 21st May, 2026 at 10.30 O' Clock in the forenoon or so soon thereafter as may be convenient to the Court when you may appear before the court either in person or through Counsel and show cause to the Court as to why Special Leave and interim relief as prayed for be not granted and the resultant appeal be not allowed.
You may file your affidavit in opposition to the petition as provided under Rule 14(1) of Order XXI, S.C.R.2013 immediately from the date of receipt of notice or not later than 2 weeks before the date appointed for hearing, whichever be earlier, but shall do so only by setting out the grounds in opposition to the questions of law or grounds set out in the SLPS and may produce such pleadings and documents filed before the Court/Tribunal against whose order the SLP is filed and shall also set out the grounds for not granting interim order or for vacating interim order if already granted..
TAKE FURTHER NOTICE that if you fail to enter appearance as aforesaid, no further notice shall be given to you even after the grant of special leave for hearing of the resultant appeal and the matter above mentioned shall be disposed of in your absence.
Dated: 13th April, 2026
Copy to :-
1 Mr. Anirudh Sanganeria (adv.), **2** Ms. Jayasree Narasimhan (adv.), **3** Mr. Deepak Prakash (adv.) **4** Mr. Lzafeer Ahmad B. F. (adv.), **5** Ms. Patil Rekha Chandra Gouda (adv.), **6** Ms. Smriti Churiwal (adv.), **7** Mr. Javedur Rahman (adv.), **8** Mr. Vishnu Sharma A.s. (adv.)

Sd/-
ASSISTANT REGISTRAR
DIPR/CP/496/Zen/2026-27

ಕಾವೇರಿ ನೀರಾವರಿ ನಿಗಮ ನಿಯಮಿತ
(ಕರ್ನಾಟಕ ಸರ್ಕಾರದ ಒಂದು ಉದ್ಯಮ)
ಕಾರ್ಯಪಾಲಕ ಅಭಿಯಂತರರವರ ಕಛೇರಿ, ಹೇಮಾವತಿ ನಾಲಾ ವಿಭಾಗ,
ಕಾ.ನೀ.ನಿ.ನಿ ತುಮಕೂರು

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಅಲ್ಪಾವಧಿ ಟೆಂಡರ್ ಪ್ರಕಟಣೆ ಸಂ; 01/2026–27 ದಿನಾಂಕ: 29.04.2026

ಮಾನ್ಯ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು, ರವರ ಪರವಾಗಿ ಕಾರ್ಯಪಾಲಕ ಅಭಿಯಂತರರು, ಕಾ.ನೀ.ನಿ.ನಿ, ಹೇಮಾವತಿ ನಾಲಾ ವಿಭಾಗ, ತುಮಕೂರು ವ್ಯಾಪ್ತಿಯ ರೂ:–36.51 ಲಕ್ಷ ದಿಂದ 379.40 ಲಕ್ಷದವರೆಗಿನ 02 ಕೆಲಸ ಕಾಮಗಾರಿಗಳ ಟೆಂಡರ್‌ನ್ನು ದ್ವಿ–ಲಕೋಟೆ ಪದ್ಧತಿಯಲ್ಲಿ KTPP ನಿಬಂಧನೆಗಳೊಂದಿಗೆ, ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮೂಲಕ ಮಾತ್ರ ಆಹ್ವಾನಿಸಲಾಗಿದೆ.
ಇ–ಪೋರ್ಟಲ್‌ನಲ್ಲಿ ಆಕ್ಷೇಪಣೆಗಳಿಗೆ ಕೊನೆಯ ದಿನಾಂಕ: 06.05.2026 ಸಂಜೆ 4.00 ಗಂಟೆ ವರೆಗೆ. ಇ–ಪೋರ್ಟಲ್ ಮೂಲಕ ಟೆಂಡರ್‌ಗಳನ್ನು ಸಲ್ಲಿಸುವ ದಿನಾಂಕ: 4.05.2026 ರಿಂದ 13.05.2026 ಸಂಜೆ 4.00 ಗಂಟೆ ವರೆಗೆ ತಾಂತ್ರಿಕ ಬಿಡ್ ಇ–ಪೋರ್ಟಲ್‌ನಲ್ಲಿ ತೆರೆಯುವ ದಿನಾಂಕ:–14.05.2026 ಸಂಜೆ 4.30ಗಂಟೆ ನಂತರ. ಆರ್ಥಿಕ ಬಿಡ್ ಇ–ಪೋರ್ಟಲ್‌ನಲ್ಲಿ ತೆರೆಯುವ ದಿನಾಂಕ:–16.05.2026 ಬೆಳಗ್ಗೆ 11.00 ಗಂಟೆ ನಂತರ (ತಾಂತ್ರಿಕ ಬಿಡ್ ಅನುಮೋದನೆಗೊಂಡ ನಂತರ).
ಇ.ಎಂ.ಡಿ ಮೊತ್ತ, ಕಾಲಾವಧಿ, ಕಾಮಗಾರಿಗಳ ವಿವರ, ಅರ್ಹತಾ ಷರತ್ತುಗಳು, ಹಾಗೂ ಇನ್ನಿತರ ವಿವರಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಸಿಸ್ಟಮ್ https://kppp.karnataka.gov.in/ ಮೂಲಕ ಪಡೆಯಬಹುದಾಗಿರುತ್ತದೆ.

ಸಹಿ/– ಕಾರ್ಯಪಾಲಕ ಅಭಿಯಂತರರು,
ಹೇಮಾವತಿ ನಾಲಾ ವಿಭಾಗ, ತುಮಕೂರು
DIPR/TUM/46/KSMCA/2026-27

ಗ್ರೇಟರ್ ಬೆಂಗಳೂರು ಪ್ರಾಧಿಕಾರ
ಮುಖ್ಯ ಆರೋಗ್ಯಾಧಿಕಾರಿಗಳು(ಸಾ.ಆ) ರವರ ಕಛೇರಿ, ಅನೆಕ್ಸ್ ಕಟ್ಟಡ–2, ಜಿ.ಬಿ.ಎ ಕೇಂದ್ರ ಕಛೇರಿ, ಬೆಂಗಳೂರು–02.

ಸಂಖ್ಯೆ: GBA/2025-26/IND0001-Call-3/IND0002-Call-3/ IND0003-Call-2/IND0005-Call-2 ದಿನಾಂಕ: 04.05.2026

ಟೆಂಡರ್ ಅಧಿಸೂಚನೆ

ಗ್ರೇಟರ್ ಬೆಂಗಳೂರು ಪ್ರಾಧಿಕಾರವು ಅರ್ಹ ಟೆಂಡರ್‌ದಾರರಿಂದ ಕೆಳಕಂಡ ಕಾಮಗಾರಿಗಾಗಿ ಅಲ್ಪಾವಧಿಯ ಮರು–ಟೆಂಡರ್ ಆಹ್ವಾನಿಸಲಾಗಿದ್ದು, ಜಿಬಿಎ ವ್ಯಾಪ್ತಿಯ ಐದು ಕಾರ್ಪೋರೇಷನ್‌ಗಳ ನಮ್ಮ ಕ್ಲಿನಿಕ್‌ಗಳಿಗೆ ಅಗತ್ಯವಿರುವ 243 ರೆಫ್ರಿಜಿರೇಟರ್‌ಗಳು (180–200 ಲೀಟರ್), 243 ಸೆಂಟ್ರಿಫ್ಯೂಜ್ ಯಂತ್ರಗಳು, ಲಸಿಕೆ ಸಂಗ್ರಹಣೆಗೆ ಕೋಲ್ಡ್ ಬಾಕ್ಸ್, ವ್ಯಾಕ್ಯುಟೈನರ್ ಮತ್ತು ಪಿಪೆಟ್ ಸೆಟ್‌ಗಳ ಪೂರೈಕೆಗಾಗಿ ಟೆಂಡರ್ ಆಹ್ವಾನಿಸಲಾಗಿದೆ.
ಟೆಂಡರ್ ಪ್ರಕ್ರಿಯೆಯ ವೇಳಾಪಟ್ಟಿ:

1	ಟೆಂಡರ್ ಉಲ್ಲೇಖ ಸಂಖ್ಯೆ:	GBA/2025-26/IND0001-Call-3/ IND0002-Call-3/IND0003-Call-2/IND0005-Call-2
2	ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪೋರ್ಟಲ್ ವೆಬ್‌ಸೈಟ್ **http://kppp.karnataka.gov.in** ನಿಂದ ಟೆಂಡರ್ ದಾಖಲೆಯನ್ನು ಡೌನ್‌ಲೋಡ್ ಮಾಡುವ ಪ್ರಾರಂಭ ದಿನಾಂಕ.	04.05.2026 ರಿಂದ
3	ಪೂರ್ವ–ಟೆಂಡರ್ ಸಭೆಯ ದಿನಾಂಕ, ಸಮಯ ಮತ್ತು ಸ್ಥಳ:	06.05.2026 ರಂದು ಬೆಳಿಗ್ಗೆ 11:30 ಗಂಟೆಗೆ ಸ್ಥಳ: ಮುಖ್ಯ ಆರೋಗ್ಯಾಧಿಕಾರಿ ಕಛೇರಿ, ನೆಲ ಮಹಡಿ, ಅನುಬಂಧ–3 ಕಟ್ಟಡ, ಎನ್.ಆರ್.ವೃತ್ತ, ಬೆಂಗಳೂರು–560002.
4	ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪೋರ್ಟಲ್‌ನಲ್ಲಿ ಆನ್‌ಲೈನ್ ಪ್ರಶ್ನೆಗಳನ್ನು ಅಪ್‌ಲೋಡ್ ಮಾಡಲು ಕೊನೆಯ ದಿನಾಂಕ ಮತ್ತು ಸಮಯ	06.05.2026 ಸಂಜೆ 5:00 ಗಂಟೆಯೊಳಗೆ
5	ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪೋರ್ಟಲ್‌ನಲ್ಲಿ ಇ–ಟೆಂಡರ್ ಅಪ್‌ಲೋಡ್ ಮಾಡಲು ಕೊನೆಯ ದಿನಾಂಕ ಮತ್ತು ಸಮಯ	14.05.2026 ಸಂಜೆ 5:00 ಗಂಟೆಯೊಳಗೆ
6	ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪೋರ್ಟಲ್‌ನಲ್ಲಿ ತಾಂತ್ರಿಕ ಬಿಡ್‌ಗಳನ್ನು ಆನ್‌ಲೈನ್‌ನಲ್ಲಿ ತೆರೆಯುವ ದಿನಾಂಕ ಮತ್ತು ಸಮಯ.	15.05.2026 ಸಂಜೆ 5:10 ಗಂಟೆಗೆ
7	ಮಾದರಿ ಪ್ರದರ್ಶನ ದಿನಾಂಕ ಮತ್ತು ಸಮಯ:	ತಾಂತ್ರಿಕ ಬಿಡ್ ತೆರೆಯುವಿಕೆಯ ನಂತರ ತಿಳಿಸಲಾಗುವುದು
8	ಸಂಪರ್ಕಕ್ಕಾಗಿ ವಿಳಾಸ	ಮುಖ್ಯ ಆರೋಗ್ಯಾಧಿಕಾರಿ (ಸಾರ್ವಜನಿಕ ಆರೋಗ್ಯ), ಮುಖ್ಯ ಆರೋಗ್ಯಾಧಿಕಾರಿ ಕಛೇರಿ, ನೆಲ ಮಹಡಿ, ಅನೆಕ್ಸ್ ಕಟ್ಟಡ–2, ಎನ್.ಆರ್. ವೃತ್ತ, ಬೆಂಗಳೂರು–560002. ಇ–ಮೇಲ್: choph515@gmail.com. ದೂರವಾಣಿ: 9845208571

ಈ ಟೆಂಡರ್‌ನಲ್ಲಿ ಭಾಗವಹಿಸಲು ಆಸಕ್ತ ಸೇವಾ ಪೂರೈಕೆದಾರರು ಕೆಪಿಪಿ ಪೋರ್ಟಲ್ **(https://kppp.karnataka.gov.in)** ಮೂಲಕ ಟೆಂಡರ್ ಡಾಕ್ಯುಮೆಂಟ್‌ಗಳನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು.

ಸಹಿ/– ಮುಖ್ಯ ಆರೋಗ್ಯಾಧಿಕಾರಿ (ಸಾರ್ವಜನಿಕ ಆರೋಗ್ಯ)
ಗ್ರೇಟರ್ ಬೆಂಗಳೂರು ಪ್ರಾಧಿಕಾರ

ಕರ್ನಾಟಕ ಸರ್ಕಾರ
ಕಾರ್ಯಪಾಲಕ ಇಂಜಿನಿಯರವರ ಕಛೇರಿ,
ಲೋಕೋಪಯೋಗಿ ಇಲಾಖೆ ವಿಭಾಗ, ಚಿತ್ರದುರ್ಗ.
ಸಂಖ್ಯೆ: ಕಾಇಂ:ಲೋವಿಚಿ:ಎಇ–2:ಟೆಂಡರ್–06:2026–27 ದಿನಾಂಕ: 04.05.2026

ಅಲ್ಪಾವಧಿ ಇ–ಟೆಂಡರ್ ಪ್ರಕಟಣೆ

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅದ್ಯಾದೇಶ 2000 ಹಾಗೂ ಆಕ್ಟ್ 2000 ರ ಪ್ರಕಾರ ಸ್ಟ್ಯಾಂಡರ್ಡ್ ಟೆಂಡರ್ ಡಾಕ್ಯುಮೆಂಟ್‌ಗಳ ನಿಯಮಗಳನ್ವಯ ಕರ್ನಾಟಕ ರಾಜ್ಯ ಸರ್ಕಾರದ ರಾಜ್ಯಪಾಲರ ಪರವಾಗಿ ಕಾರ್ಯಪಾಲಕ ಇಂಜಿನಿಯರು, ಲೋಕೋಪಯೋಗಿ ಇಲಾಖೆ ವಿಭಾಗ, ಚಿತ್ರದುರ್ಗ ಇವರಿಂದ ಕರ್ನಾಟಕ ಲೋಕೋಪಯೋಗಿ ಇಲಾಖೆಯಲ್ಲಿ ನೋಂದಾಯಿತರಾದ ಅರ್ಹ ಗುತ್ತಿಗೆದಾರರಿಂದ ಕೆಪಿಪಿಪಿ ಪೋರ್ಟಲ್ ಮುಖಾಂತರ ಈ ಕೆಳಕಂಡ ಕಾಮಗಾರಿಗೆ ದ್ವಿ ಲಕೋಟೆ ಪದ್ಧತಿಯಲ್ಲಿ ಟೆಂಡರ್‌ನ್ನು ಆಹ್ವಾನಿಸಲಾಗಿದೆ.
ಅರ್ಹ ಗುತ್ತಿಗೆದಾರರು ವೆಬ್‌ಸೈಟ್ kppp.karnataka.gov.in ನಲ್ಲಿ ಟೆಂಡರ್‌ಗಾಗಿ ವಿವರಗಳನ್ನು ಪಡೆದು ಭಾಗವಹಿಸಬಹುದು.
ಕಾಮಗಾರಿಗಳ ವಿವರ:– ಕೆಪಿಪಿಪಿ ಪೋರ್ಟಲ್ ಮೂಲಕ– ದ್ವಿ ಲಕೋಟೆ ಪದ್ಧತಿ:–ಲೆಕ್ಕ ಶೀರ್ಷಿಕೆ: 3054–04–337–1–10–200 ಜಿಲ್ಲಾ ಮತ್ತು ಇತರೆ ರಸ್ತೆಗಳ ನಿರ್ವಹಣೆ :–
(1) ಹೊಸದುರ್ಗ ತಾಲ್ಲೂಕಿನ ಕಲ್ಕೆರೆಯಿಂದ ಮಲ್ಲೇನಹಳ್ಳಿ ಕ್ರಾಸ್ ಮಾರ್ಗ ಬಲ್ಲಾಳಸಮುದ್ರ ಆಲಘಟ್ಟ ಮಲ್ಲೇನಹಳ್ಳಿ ಸಂಪರ್ಕಿಸುವ ರಸ್ತೆ ಮತ್ತು ಆಲಘಟ್ಟದಿಂದ ವಡ್ಡರಹಟ್ಟಿಗೆ ಕೂಡು ರಸ್ತೆಯ ಕಿ.ಮೀ 0.00 ರಿಂದ ಕಿ.ಮೀ 2.55 (ಕಡೂರು ತಾಲ್ಲೂಕು ಗಡಿ) ವರೆಗೆ ಅಭಿವೃದ್ಧಿ ಮತ್ತು ಡಾಂಬರೀಕರಣ (ವ.ಇಂ. 34940)/4ನೇ ಕರೆ
ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)120.00
ಟೆಂಡರ್ ದಿನಾಂಕಗಳು ಈ ಕೆಳಕಂಡಂತಿವೆ. ಟೆಂಡರ್ ಬಗ್ಗೆ ವಿಚಾರಿಸಲು/ಮಾಹಿತಿ ಪಡೆಯಲು ಕೊನೆಯ ದಿನಾಂಕ 08–05–2026 ಸಮಯ 17–30
ಟೆಂಡರ್ ಸಲ್ಲಿಸುವ ಅಂತಿಮ ದಿನಾಂಕ 11–05–2026 ಸಮಯ 16–00
ತಾಂತ್ರಿಕ ಬಿಡ್ ತೆರೆಯುವ ದಿನಾಂಕ ಮತ್ತು ವೇಳೆ 12–05–2026 ಸಮಯ 16–15
ಆರ್ಥಿಕ ಬಿಡ್ ತೆರೆಯುವ ದಿನಾಂಕ ಮತ್ತು ವೇಳೆ 14–05–2026 ಸಮಯ 11–00
ಹೆಚ್ಚಿನ ವಿವರಗಳಿಗೆ ಸದರಿ ಕಛೇರಿಯಿಂದ (ದೂರವಾಣಿ ಸಂಖ್ಯೆ 08194 222446) ಹಾಗೂ ಹೆಚ್.ಪಿ. ಕಂಪನಿಯ ಸಹಾಯಕ ದೂರವಾಣಿ ಸಂಖ್ಯೆ 91 9240214000 ಮತ್ತು 91 9240214001 ರಿಂದ ಮಾಹಿತಿ ಪಡೆಯಬಹುದು

DIPR/CTA/KSMCA/ 85/2026-27
ಸಹಿ/– ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ಚಿತ್ರದುರ್ಗ.

ವಿರೋಧಿಗಳಿಗೆ ನನ್ನ ಕೆಲಸಗಳೇ ಉತ್ತರ

ಮಾಜಿ ಶಾಸಕರ ಬಗ್ಗೆ ಮಾತಾಡಲ್ಲ, ಅವರು ಮಾತಾಡಿಕೊಂಡೇ ಇರಲಿ: ನಂಜೇಗೌಡ



ಮಾಲೂರು ನಗರದ ಶಿಬಿರ ಕಚೇರಿಯ ಕಚೇರಿಯ ಸಭಾಂಗಣದಲ್ಲಿ ಸುದ್ದಿಗಾರರೊಂದಿಗೆ ಶಾಸಕ ಕೆ.ವೈ.ನಂಜೇಗೌಡ ಮಾತನಾಡಿದರು.

• **ಕನ್ನಡಪ್ರಭ ವಾರ್ತೆ** ಮಾಲೂರು
ಮಾಜಿ ಶಾಸಕ ಕೆ.ಎಸ್. ಮಂಜುನಾಥ್ ಗೌಡ ಅವರು ಮಾತಾಡಿಕೊಂಡೆ ಇರಲಿ. ನನ್ನ ಬಗ್ಗೆ ಆಪಾದನೆಗಳು ಮಾಡುತ್ತ ಇರಲಿ ಬುದ್ಧಿಜೀವಿಗಳು, ನನ್ನ ಆಪ್ತರು ನೀಡಿರುವ ಸಲಹೆಯಂತೆ ನಾನು ಯಾವುದಕ್ಕೂ ತಲೆಕೆಡಿಸಿಕೊಳ್ಳುವುದಿಲ್ಲ ಎಂದು ಶಾಸಕ ಕೆ.ವೈ. ನಂಜೇಗೌಡ ಹೇಳಿದರು.

ಅವರು ನಗರದ ಶಿಬಿರ ಕಚೇರಿಯ ಕಚೇರಿಯ ಸಭಾಂಗಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಮಾಜಿ ಶಾಸಕರ ಬಗ್ಗೆ ನಾನು ಮಾತನಾಡುವುದಿಲ್ಲ. ಅವರು ದಿನವೂ ನನ್ನ ಬಗ್ಗೆ ಮಾತನಾಡಲಿ. ನಾನು ಯಾರ ಬಗ್ಗೆಯೂ ಮಾತನಾಡುವುದಿಲ್ಲ. ಕ್ಷೇತ್ರದ ಅಭಿವೃದ್ಧಿ ನನ್ನ ಗುರಿಯಾಗಿದೆ. ಸರ್ಕಾರದಿಂದ ಕ್ಷೇತ್ರದ ಅಭಿವೃದ್ಧಿಗೆ ಅನುದಾನಗಳನ್ನು ತಂದು ಅಭಿವೃದ್ಧಿ ಮಾಡುವುದೇ ನನ್ನ ಗುರಿಯಾಗಿದೆ. ಸಿದ್ಧಾರ್ಥ್ ಆನಂದ್ ಅವರ ಹೆಸರು ಮಾಜಿ ಶಾಸಕರು ಪ್ರಸ್ತಾಪಿಸಿದ್ದಾರೆ. ಸಿದ್ದಾರ್ಥ್ ಆನಂದ್ ನಮ್ಮ ಹೋಬಳಿಯ ಹುಡುಗ. ನಮ್ಮ ಕುಟುಂಬದೊಂದಿಗೆ ಬೆಳೆದ ಹುಡುಗನಾಗಿದ್ದು, ಅವನ ಬಗ್ಗೆ ನಮಗೆ ಪ್ರೀತಿ ಇದೆ. ಅವನು ಎಂದಿಗೂ ನನ್ನ ಬಗೆ ಮಾತನಾಡುವುದಿಲ್ಲ. ಆದರೆ ಅವನಿಂದ ಬೇರೆಯವರು ಮಾತನಾಡಿಸಿದ್ದಾರೆ ಎಂದರು.

ತಾಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವ ಕಡೆ ತ್ವರಿತಗತಿಯಲ್ಲಿ ಕ್ರಿಯಾಯೋಜನೆ ಇಲ್ಲದೆ ಕೊಳವೆ ಬಾವಿ ಕೊರೆಸಿ ನೀರು ಪೂರೈಕೆ ಮಾಡಲು ನಗರಸಭೆ ಹಾಗೂ ಗ್ರಾ.ಪಂಗಳ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಕೆ.ಸಿ.ವ್ಯಾಲಿ ನೀರು ಕೆಲವು ತಾಂತ್ರಿಕ ಕಾರಣಗಳಿಂದ ತಾಲೂಕಿನ ಪಾಲಿಗೆ ಬರಬೇಕಾದ ನೀರು ಪೂರೈಕೆ ಆಗುತ್ತಿಲ್ಲ. ಈ ಬಗ್ಗೆ ಇಂಜಿನಿಯರ್‌ಗಳ ಬಳಿ ಚರ್ಚಿಸಲಾಗಿದೆ. ಇತ್ತೀಚಿನ ದಿನಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಕಂಡುಬಂದಿದ್ದು ಈಗಾಗಲೇ ವಿದ್ಯುತ್‌ನ ಸಮಸ್ಯೆಯನ್ನು ನೀಗಿಸಲು ಇಂಧನ ಸಚಿವ ಜಾರ್ಜ್ ಅವರ ಬಳಿ ಚರ್ಚಿಸಿ ತಾಲೂಕಿಗೆ ಅಗತ್ಯವಿರುವ 150 ಮೆಗಾ ವ್ಯಾಟ್‌ನ ಟ್ರಾನ್ಸ್‌ಫಾರ್ಮರ್‌ತರಿಸಲಾಗಿದೆ. ಬೆಸ್ಕಾಂನ ಲೈನ್ ಮ್ಯಾನ್‌ಗಳು ಟ್ರಾನ್ಸ್‌ಫಾರ್ಮರ್‌ಗೆ ಆಯಿಲ್ ಅಳವಡಿಸಿ ಟ್ರಯಲ್ ನಂತರ ವಿದ್ಯುತ್ ಸಮಸ್ಯೆ ನೀಗಲಿದೆ ಎಂದರು.

ರಾಜ್ಯದಲ್ಲಿ ನಡೆದ ದಾವಣಗೆರೆ ಹಾಗೂ ಬಾಗಲಕೋಟೆಯ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವು ಎರಡು ಕಡೆ ಜಯಭೇರಿ ಬಾರಿಸಿದೆ. 2028 ರಲ್ಲಿ ಮತ್ತೇ ಕಾಂಗ್ರೆಸ್ ಪಕ್ಷವೇ ರಾಜ್ಯದಲ್ಲಿ ಆಡಳಿತಕ್ಕೆ ಬರಲಿದೆ. ಶೃಂಗೇರಿ ವಿಧಾನಸಭಾ ಕ್ಷೇತ್ರದ ಚುನಾವಣೆಯ ಅಂಚೆ ಮತಗಳ ಮರು ಮತ ಎಣಿಕೆ ವೇಳೆ ಅಕ್ರಮ ನಡೆದಿದ್ದು ಬಿಜೆಪಿಯವರು ಅಧಿಕಾರಿಗಳೊಂದಿಗೆ ಶಾಮೀಲಾಗಿ ಫಲಿತಾಂಶದಲ್ಲಿ ಏರುಪೇರು ಮಾಡಿದ್ದು, ಈ ಬಗ್ಗೆ ಪಕ್ಷದ ಹಿರಿಯರು ಕ್ರಮ ವಹಿಸಲಿದ್ದಾರೆ ಎಂದರು.

ಪೌರಾಯುಕ್ತ ಎಂ.ಎಸ್. ಮಹದೇವ್, ಯೋಜನಾ ಪ್ರಾಧಿಕಾರ ಅಧ್ಯಕ್ಷ ಎಚ್.ಎಂ. ವಿಜಯನರಸಿಂಹ, ಬ್ಲಾಕ್ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ ಎಂ ಕೃಷ್ಣಪ್ಪ, ರಾಮಮೂರ್ತಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಆಂಜಿನಪ್ಪ, ದರಕಾಸ್ತು ಸಮಿತಿಯ ಅಧ್ಯಕ್ಷ ಎಸ್.ಸಿ. ನಾರಾಯಣ ಸ್ವಾಮಿ, ನಗರಸಭಾ ಮಾಜಿ ಸದಸ್ಯ ಎ.ರಾಜಪ್ಪ, ಪರಮೇಶ್, ಇಂತಿಯಾಜ್, ಜಾಕೀರ್, ಮುರಳಿ, ವಿಜಯಲಕ್ಷ್ಮಿ, ಭಾರತಿ, ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಹೇಮಾ ಮಾಲಿನಿ, ಶಬ್ಬೀರ್, ತನ್ವೀರ್, ರೋಹಿತ್ ನಾರಾಯಣ ಹಾಜರಿದ್ದರು.

ಕರ್ನಾಟಕ ಸರ್ಕಾರ
ಅಬಕಾರಿ ಇಲಾಖೆ
ಅಬಕಾರಿ ಆಯುಕ್ತರ ಕಛೇರಿ, 2ನೇ ಮಹಡಿ, ಟಿ.ಟಿ.ಎಂ.ಸಿ. ಎ ಬ್ಲಾಕ್, ಬಿ.ಎಂ.ಟಿ.ಸಿ.ಕಟ್ಟಡ ಶಾಂತಿನಗರ, ಬೆಂಗಳೂರು–560027.

Tender No:- EXCISE/2026-27/SE0184
(https://kppp.karnataka.gov.in)

ಇ–ಟೆಂಡರ್ ಪ್ರಕಟಣೆ

ಅಬಕಾರಿ ಆಯುಕ್ತರ ಕಛೇರಿಯಲ್ಲಿ ಮಂಜೂರಾದ ಹುದ್ದೆಗಳಲ್ಲಿ ಖಾಲಿ ಇದ್ದ ಹುದ್ದೆಗಳಿಗೆದುರಾಗಿ **Non-Technical** ವಿಭಾಗದಲ್ಲಿ **(ಬೆರಳಚ್ಚುಗಾರರು(16), ವಾಹನ ಚಾಲಕರು(16), ಸ್ವಚ್ಛತಾ ಸಿಬ್ಬಂದಿ(6), ಮತ್ತು Technical ವಿಭಾಗದಲ್ಲಿ ಸಿಸ್ಟಮ್ ಅನಾಲಿಸ್ಟ್ (01) ಮತ್ತು ಜೂನಿಯರ್ ಪ್ರೋಗ್ರಾಮರ್ (02) ಸೇವೆಯನ್ನು 2026–27ನೇ ಸಾಲಿನ ಅವಧಿಗೆ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಮಿಕ ಇಲಾಖೆಯಲ್ಲಿ ನೋಂದಣಿಯಾಗಿರುವ ಗುತ್ತಿಗೆದಾರರಿಂದ ದ್ವಿ–ಲಕೋಟೆ ಪದ್ಧತಿಯಲ್ಲಿ (ತಾಂತ್ರಿಕ ಮತ್ತು ಆರ್ಥಿಕ ಬಿಡ್) ಟೆಂಡರ್‌ನ್ನು https://kppp.karnataka.gov.in ಪೋರ್ಟಲ್‌ನಲ್ಲಿ ಆಹ್ವಾನಿಸಲಾಗಿದ್ದು, ಇಚ್ಛೆಯುಳ್ಳ ಅರ್ಹ ಸಂಸ್ಥೆಗಳು** ಷರತ್ತು ನಿಬಂಧನೆಗಳಿಗೊಳಪಟ್ಟು ಟೆಂಡರ್ ಸಲ್ಲಿಸಬಹುದು. ಸದರಿ ಇ–ಟೆಂಡರ್ ವೇಳಾಪಟ್ಟಿ ಈ ಕೆಳಕಂಡಂತಿವೆ.
1) ಇ–ಟೆಂಡರ್ ಅಂದಾಜು ವಾರ್ಷಿಕ ಮೊತ್ತ **ರೂ. 88,25,272/–** (ಎಂಭತ್ತೆಂಟು ಲಕ್ಷದ ಇಪ್ಪತ್ತೈದು ಸಾವಿರದ ಎರಡು ನೂರ ಎಪ್ಪತ್ತೆರಡು ಮಾತ್ರ), 2) ಇ.ಎಂ.ಡಿ ಮೊತ್ತ **ರೂ. 2,00,000/–** (ಎರಡು ಲಕ್ಷ ರೂಪಾಯಿಗಳು ಮಾತ್ರ). 3) ಭರ್ತಿ ಮಾಡಿದ ಟೆಂಡರ್ ಫಾರಂಗಳನ್ನು ಇ–ಟೆಂಡರ್‌ನಲ್ಲಿ ಸಲ್ಲಿಸುವ ಕೊನೆಯ ದಿನಾಂಕ: **15.05.2026 ರಂದು ಸಂಜೆ 5.30** ಗಂಟೆವರೆಗೆ. 4) ಟೆಂಡರ್ ತೆರೆಯುವ ದಿನಾಂಕ ಮತ್ತು ಸ್ಥಳ: **16.05.2026 ರಂದು ಬೆಳಿಗ್ಗೆ 11.00 ಗಂಟೆಗೆ ಅಬಕಾರಿ ಆಯುಕ್ತರ ಕಛೇರಿ, ಬೆಂಗಳೂರು,** ದೂರವಾಣಿ ಸಂಖ್ಯೆ: **080–22220302,** ಇ–ಮೇಲ್:**ecexcise@gmail.com.**
ಹೆಚ್ಚಿನ ಮಾಹಿತಿಯನ್ನು ಅಬಕಾರಿ ಆಯುಕ್ತರ ಕಛೇರಿಯ ಕೆಲಸದ ಸಮಯದಲ್ಲಿ ದೂರವಾಣಿ ಸಂಖ್ಯೆ: **080–22220302** ನ್ನು ಸಂಪರ್ಕಿಸಲು ಕೋರಿದೆ.

ವಾಸಾಸಂಇ/ವಾ.ಪ್ರ/ಶಿರಡಿ ಸಾಯಿ/500/2026–27
ಸಹಿ/–
ಅಬಕಾರಿ ಆಯುಕ್ತರ ಪರವಾಗಿ

ಕರ್ನಾಟಕ ಸರ್ಕಾರ
ಲೋಕೋಪಯೋಗಿ ಇಲಾಖೆ
ಕಾರ್ಯಪಾಲಕ ಇಂಜಿನಿಯರ್‌ರವರ ಕಛೇರಿ,
ಮೈಸೂರು ವಿಭಾಗ, ಮೈಸೂರು.
www:eepwdmys21@gmail.com
ದೂರವಾಣಿ ಸಂಖ್ಯೆ/ಫ್ಯಾಕ್ಸ್ ನಂ: 0821–2420810

ಈ ಕಛೇರಿ ಅಲ್ಪಾವಧಿ ಟೆಂಡರ್ ಪ್ರಕಟಣೆ ಸಂ:36/2025–26/2ನೇ ಕರೆ ದಿನಾಂಕ: 30.04.2026

ಕರ್ನಾಟಕ ರಾಜ್ಯಪಾಲರ ಪರವಾಗಿ ಮೈಸೂರು ಲೋಕೋಪಯೋಗಿ ಇಲಾಖೆ ವಿಭಾಗದ ಕಾರ್ಯಪಾಲಕ ಇಂಜಿನಿಯರ್ ರವರಿಂದ ಲೆಕ್ಕಶೀರ್ಷಿಕೆ: 5054–80–190–0–01–132–ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತ ಬಂಡವಾಳ ವೆಚ್ಚ ಅಡಿಯಲ್ಲಿ ಅನುಮೋದನೆಯಾಗಿರುವ ನಂಜನಗೂಡು ಉಪವಿಭಾಗ, ನಂಜನಗೂಡು ವ್ಯಾಪ್ತಿಯ "ನಂಜನಗೂಡು ತಾಲ್ಲೂಕು, ರಾಮನಾಥಪುರ–ತೆರಕಣಾಂಬಿ ರಾಜ್ಯ ಹೆದ್ದಾರಿ 86ರ ರಸ್ತೆಯ ಸರಪಳಿ 109.90 ರಲ್ಲಿ ಸೇತುವೆ ಮರು ನಿರ್ಮಾಣ ಕಾಮಗಾರಿ"ಗೆ ಸ್ಟ್ಯಾಂಡರ್ಡ್ ಬಿಡ್ ಡಾಕ್ಯುಮೆಂಟ್ ಕೆ.ಡಬ್ಲ್ಯೂ4ರ ಷರತ್ತು ಮತ್ತು ನಿಯಮಗಳನ್ವಯ ಕರ್ನಾಟಕ ಸಾರ್ವಜನಿಕ ಸಂಗ್ರಹಣಾ ಪಾರದರ್ಶಕ ನಿಯಮ 2000 ರಂತೆ ದ್ವಿ–ಲಕೋಟೆ ಪದ್ಧತಿಯಲ್ಲಿ ಐಟಂವಾರು ಟೆಂಡರ್ ಪ್ರಕಟಣೆಯನ್ನು ಹೊರಡಿಸಲಾಗಿದೆ. ಕೆಪಿಪಿ ಪೋರ್ಟ್‌ಲ್‌ನಲ್ಲಿ ನೊಂದಾಯಿಸಿರುವ "ಅರ್ಹ" ಲೋಕೋಪಯೋಗಿ ಗುತ್ತಿಗೆದಾರರು ಕೆಪಿಪಿ ಪೋರ್ಟ್‌ಲ್‌ನಲ್ಲಿ (viz https://kppp.karnataka.gov.in/): ದಿ:30.04.2026 ರಿಂದ 08.05.2026ರ ಸಂಜೆ 17:00 ರವರೆಗೆ ಸಲ್ಲಿಸಬಹುದಾಗಿರುತ್ತದೆ. ಸದರಿ ಕಾಮಗಾರಿಯ ಇ.ಎಂ.ಡಿ ಮೊತ್ತ ರೂ.4.76 ಲಕ್ಷಗಳಾಗಿರುತ್ತದೆ. ಮತ್ತು ಪೂರ್ವಭಾವಿ ಸಭೆಯನ್ನು ದಿ:04.05.2026ರ ಬೆಳಿಗ್ಗೆ 11.00 ಗಂಟೆಗೆ ಈ ಕೆಳಗೆ ಸಹಿ ಮಾಡಿರುವವರ ಕಛೇರಿಯಲ್ಲಿ ಏರ್ಪಡಿಸಲಾಗಿದೆ. ಕಾಮಗಾರಿಗಳಿಗೆ ಸಂಬಂಧಿಸಿದಂತೆ ಹೆಚ್ಚಿನ ವಿವರಗಳು ಬೇಕಾದ್ದಲ್ಲಿ ಈ ಕೆಳಗೆ ಸಹಿ ಮಾಡಿರುವವರ ಕಛೇರಿಯಲ್ಲಿ ಕೆಲಸದ ವೇಳೆಯಲ್ಲಿ ಪಡೆಯಬಹುದಾಗಿದ್ದು, ಯಾವುದೇ ಟೆಂಡರ್‌ನ್ನು ಅಂಗೀಕರಿಸುವ/ತಿರಸ್ಕರಿಸುವ ಹಕ್ಕನ್ನು ಈ ಕೆಳಗೆ ಸಹಿ ಮಾಡಿರುವವರು ಹೊಂದಿರುತ್ತಾರೆ. ಟೆಂಡರ್ ಪ್ರಕಟಣೆಯಲ್ಲಿ ಯಾವುದೇ ತಿದ್ದುಪಡಿ ಅಥವಾ ಮಾರ್ಪಾಡುಗಳಾದಲ್ಲಿ ಕೆಪಿಪಿ ಪೋರ್ಟ್‌ಲ್ ಮೂಲಕ ಮಾತ್ರ ಪ್ರಕಟಿಸಲಾಗುವುದು.

ಸಹಿ/– ಕಾರ್ಯಪಾಲಕ ಇಂಜಿನಿಯರ್,
ಲೋಕೋಪಯೋಗಿ ಇಲಾಖೆ, ಮೈಸೂರು ವಿಭಾಗ, ಮೈಸೂರು.
DIPR/DDMYS/132/KSMCA/111/2026-27

ಔದ್ಯಮಿಕ ನ್ಯಾಯಾಧೀಕರಣ, ನ್ಯಾಯ ದೇಗುಲ, ಹೆಚ್.ಸಿದ್ದಯ್ಯ ರಸ್ತೆ, ಬೆಂಗಳೂರು–560 027

ಸೂಚನೆ

ಕ್ರಮ ಸಂ.	ಅರ್ಜಿದಾರರು	ಪ್ರತಿವಾದಿ	ಅರ್ಜಿ ಕ್ರಮ ಸಂಖ್ಯೆ	ವಿಚಾರಣೆ ದಿನಾಂಕ
1	ವಿಭಾಗೀಯ ನಿಯಂತ್ರಣಾಧಿಕಾರಿ, ಈಶಾನ್ಯ ವಲಯ, ಬೆಂ.ಮ.ಸಾ.ಸಂಸ್ಥೆ.	ರವಣಪ್ಪ ಆರ್ ವಿ S/o ವೆಂಕಟರಾಮಪ್ಪ, ಜೇಕವಾಂಡ್ಲಪಲ್ಲಿ ಗ್ರಾಮ, ಬಾಗೇಪಲ್ಲಿ ತಾಲ್ಲೂಕು, ಕೋಲಾರ ಜಿಲ್ಲೆ–561 207	SLA No. 395/2025	12.05.2026

ಮೇಲೆ ಹೆಸರಿಸಿರುವ ಅರ್ಜಿದಾರರು ಮೇಲ್ಕಂಡ ಪ್ರತಿವಾದಿಯನ್ನು ಬೆಂ.ಮ.ಸಾ.ಸಂಸ್ಥೆಯ ಸೇವೆಯಿಂದ ವಜಾಗೊಳಿಸಲು ಕೈಗಾರಿಕಾ ವಿವಾದ ಕಾರ್ಮಿಕ ಕಾಯ್ದೆ ಪರಿಚ್ಛೇದ 33 (2) (ಬಿ) ರಡಿಯಲ್ಲಿ ಅನುಮೋದನೆ ಕೋರಿರುತ್ತಾರೆ. ಆದ್ದರಿಂದ ಮೇಲೆ ನಮೂದಿಸಿರುವ ವಿಚಾರಣಾ ದಿನಾಂಕದಂದು ಬೆಳಗ್ಗೆ 11:00 ಗಂಟೆಗೆ ಗೌರವಾನ್ವಿತ ಔದ್ಯಮಿಕ ನ್ಯಾಯಾಲಯ, ಹೆಚ್.ಸಿದ್ದಯ್ಯ ರಸ್ತೆ, ಬೆಂಗಳೂರು– 560 027, ಇಲ್ಲಿ ಹಾಜರಾಗಿ ಪ್ರತಿವಾದಿ ಆಕ್ಷೇಪಣೆಗಳನ್ನು ಸಲ್ಲಿಸಲು ಈ ಮೂಲಕ ಸೂಚಿಸಲಾಗಿದೆ. ತಪ್ಪಿದಲ್ಲಿ ಏಕಪಕ್ಷೀಯವಾಗಿ ಕ್ರಮ ಕೈಗೊಳ್ಳಲಾಗುವುದು.

ಸಹಿ/– (ಶಿರಸ್ತೆದಾರರು), ಔದ್ಯಮಿಕ ನಾಯಾಧೀಕರಣ

ಮಹಿಳೆ ಸರಗಳವು



ಚಿಕ್ಕಬಳ್ಳಾಪುರ: ಮುಸುಕುದಾರಿ ಇಬ್ಬರು ಕಳ್ಳರು ಹಾಡಹಗಲೇ ಗೃಹಿಣಿಯೊಬ್ಬರ 30 ಗ್ರಾಂ ಸರ ಗಳವು ಮಾಡಿರುವ ಘಟನೆ ನಗರದ ಚಾಮರಾಜಪೇಟೆಯಲ್ಲಿ ಭಾನುವಾರ ನಡೆದಿದೆ. ನಗರದ ವಾರ್ಡ್ 23ರ ಪ್ರಗತಿ ಕೃಷ್ಣಾ ಗ್ರಾಮೀಣ ಬ್ಯಾಂಕ್ ಪಕ್ಕದ ರಸ್ತೆಯ ನಿವಾಸಿ ಪ್ರಿಯಾ ಎಂಬ ಗೃಹಿಣಿಯೇ ಸರ ಕಳೆದುಕೊಂಡ ಮಹಿಳೆಯಾಗಿದ್ದು, ಪಲ್ಸರ್220 ಬೈಕ್‌ನಲ್ಲಿ ಬಂದ ಇಬ್ಬರು ಸರಗಳವು ಮಾಡಿದ್ದಾರೆ ಎನ್ನಲಾಗಿದೆ. ಮೇಲ್ಮಹಡಿಯಲ್ಲಿದ್ದ ಪ್ರಿಯಾ ಅವರು ತಳಮಹಡಿಗೆ ಸಂಪ್ ಪರೀಕ್ಷೆ ಮಾಡಲು ಬರುತ್ತಿದ್ದಂತೆ ಹೊಂಚುಹಾಕಿ ಕಳ್ಳರು ಸರಗಳವು ಮಾಡಿಕೊಂಡು ಪರಾರಿಯಾಗಿದ್ದಾರೆ. ಕೂಡಲೇ ನಗರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಸ್ಥಳಕ್ಕೆ ಬಂದ ಪೊಲೀಸರು ಸ್ಥಳ ಮಹಜರು ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದು, ಕಳ್ಳರಿಗೆ ಬಲೆ ಬೀಸಿದ್ದಾರೆ.

ಅಂತರಾಷ್ಟ್ರೀಯ ಪುಷ್ಪ ಹರಾಜು ಬೆಂಗಳೂರು ನಿಯಮಿತ
ನಂ.24, ಬಳ್ಳಾರಿ ರಸ್ತೆ, ಹೆಬ್ಬಾಳ, ಬೆಂಗಳೂರು – 560024, ಫೋನ್ ನಂ. . 8431235858 / 8431235867
ಇ–ಮೇಲ್ : : ifablimited@gmail.com, ವೆಬ್‌ಸೈಟ್ :-www.ifabindia.org

IFAB/2025-26/PM/WORK_INDENT3/CALL-4 Date: 30.04.2026

ಅಂತರಾಷ್ಟ್ರೀಯ ಪುಷ್ಪ ಹರಾಜು ಬೆಂಗಳೂರು ನಿಯಮಿತದ ಬಲವರ್ಧನೆ ಯೋಜನೆಯ ಡಬಲ್ ಡೀಪ್ ರ್‍ಯಾಕಿಂಗ್ ಸಿಸ್ಟಮ್, ಪ್ಯಾಲೆಟ್‌ಗಳು, ಕನ್ವೇಯರ್ ಬೆಲ್ಟ್ ಸಿಸ್ಟಮ್ ಇತ್ಯಾದಿಗಳನ್ನು ಒಳಗೊಂಡಂತೆ ತಾಂತ್ರಿಕ ಉಪಕರಣಗಳ ಪೂರೈಕೆ ಮತ್ತು ಸ್ಥಾಪನೆ ಮತ್ತು ಹೂವಿನ ಶೇಖರಣಾ ಕೋಲ್ಡ್ ರೂಮ್‌ಗಳ ನಿರ್ಮಾಣ ಟೆಂಡರ್ ಪ್ರಕಟಣೆ

IFAB ಲಿಮಿಟೆಡ್ ನಿಂದ ಕರ್ನಾಟಕ ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್ **https://kppp.karnataka.gov.in** ಮೂಲಕ ಎರಡು ಬಿಡ್ ಸಿಸ್ಟಮ್ ಆನ್‌ಲೈನ್ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ಅಂತರಾಷ್ಟ್ರೀಯ ಪುಷ್ಪ ಹರಾಜು ಬೆಂಗಳೂರು ನಿಯಮಿತದಲ್ಲಿ **RIDF** ಅಡಿಯಲ್ಲಿ ಡಬಲ್ ಡೀಪ್ ರ್‍ಯಾಕಿಂಗ್ ಸಿಸ್ಟಮ್, ಪ್ಯಾಲೆಟ್‌ಗಳು, ಕನ್ವೇಯರ್ ಬೆಲ್ಟ್ ಸಿಸ್ಟಮ್, ಇತ್ಯಾದಿ ಸೇರಿದಂತೆ ತಾಂತ್ರಿಕ ಉಪಕರಣಗಳ ಪೂರೈಕೆ ಮತ್ತು ಸ್ಥಾಪನೆ ಹಾಗೂ ಹೂವಿನ ಸಂಗ್ರಹಣೆ ಕೋಲ್ಡ್ ರೂಮ್‌ಗಳ ನಿರ್ಮಾಣ **(IFAB/2025-26/PM /WORK_INDENT3/CALL-4)**ಕ್ಕಾಗಿ ದಿ: **30.04.2026** ರಂದು ಟೆಂಡರ್ ಆಹ್ವಾನಿಸಲಾಗಿರುತ್ತದೆ. ಟೆಂಡರ್ ವಿವರ ಮತ್ತು ದಾಖಲೆಗಳು ಕರ್ನಾಟಕ ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಮಾತ್ರ ದಿನಾಂಕ: **30.04.2026** ರಿಂದ ಲಭ್ಯವಿರುತ್ತದೆ, ಟೆಂಡರ್ ಸಲ್ಲಿಸಲು ಕೊನೆಯ **ದಿನಾಂಕ: 11.05.2026 ರ ಸಂಜೆ 4.00 ಗಂಟೆ** ಆಗಿರುತ್ತದೆ.
ದಯವಿಟ್ಟು ಗಮನಿಸಿ, ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಲಾದ ಟೆಂಡರ್ ದಾಖಲೆಯಲ್ಲಿ ಕೊನೆಯ ದಿನಾಂಕ ವ್ಯತ್ಯಾಸವಾಗಿ ಕೈತಪ್ಪಿನಿಂದ 23.04.2026 ಎಂದು ನಮೂದಿಸಲಾಗಿದೆ. ಅದನ್ನು **11.05.2026** ಎಂದು ಓದಿಕೊಳ್ಳಲು ವಿನಂತಿಸಲಾಗಿದೆ.

ಸಹಿ/–
ವ್ಯವಸ್ಥಾಪಕ ನಿರ್ದೇಶಕರು
ವಾ.ಸಾ.ಸಂ.ಇ/ವಾಪ್ರ/480/ಶಿರಡಿ ಸಾಯಿ/2026–27